ಸಂಪುಟ : 10 ಸಂಚಿಕೆ: 222 ಪುಟ : 4+2 ಬೆಲೆ: 3.00 ಮಂಗಳವಾರ ಅಕ್ಟೋಬರ್ 14 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 222 Pages : 4+2 Price : 3.00 Tuesday October 14 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿನಿರತ ಚಟುವಟಿಕೆಗಳ ಸಂಬಂಧ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನ ಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟ್‌ಮೆಂಟ್ ಲಗತ್ತಿಸಿ "ಸೇವಾ ಸಿಂಧು" ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.

ರಾಜ್ಯದ ಎಲ್ಲ ತಾಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾ ಸಿಂಧು" ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರಿಯಾಂಕ್ ಖರ್ಗೆ ವಿರುದ್ಧ ನರಗುಂದ ಶಾಸಕ ಸಿ.ಸಿ. ಪಾಟೀಲ ವಾಗ್ದಾಳಿ

# ಪ್ರಿಯಾಂಕ್ ಖರ್ಗೆ ಇತಿಹಾಸ ಅರಿಯಲಿ

■ ವಿಜಯಸಾಕ್ಷಿ ಸುದ್ದಿ, ಗದಗ



ದೇಶಭಕ್ತ ಸಂಘಟನೆ ಆರ್‌ಎಸ್‌ಎಸ್ ನಿಷೇಧಿಸುವಂತೆ ಪತ್ರ ಬರೆದಿರುವ ಸಚಿವ ಪ್ರಿಯಾಂಕ್ ಖರ್ಗೆಗೆ ತಾಕತ್ತಿದ್ದರೆ ಪಿಎಫ್‌ಐ, ಎಸ್‌ಡಿಪಿಐ ಬ್ಯಾನ್ ಮಾಡಲಿ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಸವಾಲು ಹಾಕಿದರು.

ಸೋಮವಾರ ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್‌ಎಸ್‌ಎಸ್ ಭಾರತದ ಅಖಂಡತೆ ಮತ್ತು ಏಕತೆಯನ್ನು ಗೌರವಿಸುತ್ತದೆ. ನೆಹರೂ ಸಹ ಈ ಸಂಘಟನೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಈ ಹಿಂದಿನ ಹತ್ತಾರು ಜನ ಕಾಂಗ್ರೆಸ್ ನಾಯಕರಿಂದಲೇ ಆರ್‌ಎಸ್‌ಎಸ್ ನಿಷೇಧ ಮಾಡಲು ಸಾಧ್ಯವಾಗಿಲ್ಲ. ಈಗ ಪ್ರಿಯಾಂಕ್ ಖರ್ಗೆಗೆ ಅದು ಸಾಧ್ಯವೇ ಎಂದು ವಾಗ್ದಾಳಿ ನಡೆಸಿದರು. ಇನ್ನು ಪ್ರಿಯಾಂಕ್ ಖರ್ಗೆ ಬರೆದ ಪತ್ರಕ್ಕೆ ಸಿಎಂ ಸಿದ್ದರಾಮಯ್ಯ ತಕ್ಷಣ ಷರಾ ಬರೆದು ಅಧಿಕಾರಿಗಳಿಗೆ ಕಳುಹಿಸಿರುವುದು ನೋಡಿದರೆ ಡಿಸೆಂಬರ್ (ಕ್ರಿಸ್‌ಮಸ್) ಹತ್ತಿರ ಬರುತ್ತಿರುವುದು ಸ್ಪಷ್ಟವಾಗುತ್ತದೆ. ಅಲ್ಪಸಂಖ್ಯಾತ ಮತಗಳ ಓಲೈಕೆಗಾಗಿ ಕಾಂಗ್ರೆಸ್ ಆರ್‌ಎಸ್‌ಎಸ್ ಮೇಲೆ ಮುಗಿಬಿದ್ದಿದೆ. ಇದರಿಂದ ಸಂಘಟನೆಗೆ ಯಾವುದೇ ಹಾನಿ ಆಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

2002ರಲ್ಲಿ ಬೆಂಗಳೂರಿನಲ್ಲಿ ನಡೆದ ಸಮರಸತಾ ಸಂಗಮ ಕಾರ್ಯಕ್ರಮದ ಸಮಯದಲ್ಲಿ ಮಲ್ಲಿಕಾರ್ಜುನ ಖರ್ಗೆ ಭೇಟಿ ನೀಡಿ ಆರ್‌ಎಸ್‌ಎಸ್ ಕಾರ್ಯಗಳನ್ನು ಮೆಚ್ಚಿಕೊಂಡಿದ್ದಾರೆ. ಹೀಗಾಗಿ ಪ್ರಿಯಾಂಕ್ ಖರ್ಗೆ ಅವರು ಹಿಂದಿನ ಇತಿಹಾಸವನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ವಯಸ್ಸು, ಅಧಿಕಾರ, ಹಣ ಏಕಕಾಲಕ್ಕೆ ಬಂದಿರುವುದರಿಂದ ಪ್ರಿಯಾಂಕ್ ಖರ್ಗೆ ಈ ರೀತಿ ಮಾತಾಡುತ್ತಿದ್ದಾರೆ. ಮೊದಲು ತಮ್ಮ ಕ್ಷೇತ್ರದ ಶಿಕ್ಷಣ ವ್ಯವಸ್ಥೆ ಯಾವ ಮಟ್ಟದಲ್ಲಿದೆ ಎನ್ನುವುದನ್ನು ನೋಡಲಿ. ರಾಜ್ಯದ ಗುಂಡಿ ಮುಚ್ಚಲು ಯೋಗ್ಯತೆ ಇಲ್ಲದವರು ಶತಮಾನದ ಇತಿಹಾಸ ಹೊಂದಿರುವ ಆರ್‌ಎಸ್‌ಎಸ್ ಬ್ಯಾನ್ ಮಾಡಲು ಹೊರಟಿದ್ದಾರೆ ಎಂದು ಟೀಕಿಸಿದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಕಳೆದರೂ ರಾಜ್ಯದಲ್ಲಿ ಅಭಿವೃದ್ಧಿ ಬಗ್ಗೆ ಚಿಂತನೆ ಇಲ್ಲ. ಬೇಜವಾಬ್ದಾರಿ, ಹಣಕಾಸಿನ ನಿರ್ವಹಣೆಯಿಂದಾಗಿ ಅಭಿವೃದ್ಧಿ ಸಂಪೂರ್ಣ ಕುಂಠಿತವಾಗಿದೆ.

> ಅಲ್ಪಸಂಖ್ಯಾತರ ಓಲೈಕೆ ಮಾಡುತ್ತಿರುವ ಕಾಂಗ್ರೆಸ್ ಸರಕಾರಕ್ಕೆ ನಿಜವಾಗಿಯೂ ಅಲ್ಪಸಂಖ್ಯಾತರ ಬಗ್ಗೆ ಕಾಳಜಿ ಇದ್ದರೆ, ಆ ಸಮುದಾಯದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ಕೌಶಲ್ಯ ತರಬೇತಿ ನೀಡಲಿ. ಒಂದು ವೇಳೆ ಅಲ್ಪಸಂಖ್ಯಾತರು ಶಿಕ್ಷಣವಂತರಾದರೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವುದಿಲ್ಲ ಎನ್ನುವ ಕಾರಣಕ್ಕೆ ಅಲ್ಪಸಂಖ್ಯಾತ ಮತ್ತು ದಲಿತ ಸಮುದಾಯವನ್ನು ಕೇವಲ ಮತ ಬ್ಯಾಂಕ್ ಆಗಿ ಮಾತ್ರ ಬಳಸಿ ತುಳಿಯುವ ಪ್ರಯತ್ನವನ್ನು ಕಾಂಗ್ರೆಸ್ ನಿರಂತರವಾಗಿ ಮಾಡುತ್ತಿದೆ ಎಂದು ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು.

ಆಡಳಿತ ವೈಫಲ್ಯದ ಗಮನ ಬೇರೆಡೆ ಸೆಳೆಯಲು ಸರ್ಕಾರವು ತಂತ್ರಗಳನ್ನು ಅನುಸರಿಸುತ್ತಿದೆ. ಅದರಲ್ಲಿ ಆರ್‌ಎಸ್‌ಎಸ್ ಬ್ಯಾನ್ ವಿಷಯವೂ ಒಂದಾಗಿದೆ ಎಂದು ಆಪಾದಿಸಿದರು. ಯಾವುದೇ ಜನಪ್ರತಿನಿಧಿ ಯೊಬ್ಬರಿಗೆ ಕೀಳಾಗಿ 'ಕಿರಿಕೋಪಿ ಎಂಎಲ್‌ಎ' ಎಂದು ಒಬ್ಬ ಉಪಮುಖ್ಯಮಂತ್ರಿ ಕರೆಯುವುದು ಶೋಭೆ ತರುವಂತಹದ್ದಲ್ಲ. ಒಂದು ವೇಳೆ ಕೇಂದ್ರ ಮಂತ್ರಿಯೊಬ್ಬರು ಡಿ.ಕೆ. ಶಿವಕುಮಾರ ಅವರಿಗೆ ಶಾಲು ಹಾಕಿದ ಮಂತ್ರಿ ಎಂದು ಕರೆದರೆ ಹೇಗಾಗುತ್ತದೆ? ಜನಪ್ರತಿನಿಧಿಯೊಬ್ಬರನ್ನು ಹೀಗೆ ಕರೆದಿರುವುದು ಅಧಿಕಾರದ ಮದ ಏರಿರುವುದನ್ನು ತೋರಿಸುತ್ತದೆ ಎಂದು ಸಿ.ಸಿ. ಪಾಟೀಲ ಟೀಕಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ, ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ಸಿದ್ದಪ್ಪ ಪಲ್ಲೇದ, ಅನಿಲ ಅಬ್ಬಿಗೇರಿ, ರಾಘವೇಂದ್ರ ಯಳವತ್ತಿ, ಶಿವು ಹಿರೇಮನಿಪಾಟೀಲ ಮುಂತಾದವರು ಉಪಸ್ಥಿತರಿದ್ದರು.

### ಆರ್‌ಎಸ್‌ಎಸ್ ಶತಮಾನೋತ್ಸವದ ಅಂಗವಾಗಿ ಪಥಸಂಚಲನ ಕಾರ್ಯಕ್ರಮ

# ಸ್ವದೇಶಿ ಜೀವನ ಶೈಲಿಯನ್ನು ಅಳವಡಿಸಿಕೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತ ವಿವಿಧತೆಯಲ್ಲಿ ಏಕತೆಯನ್ನು ಹೊಂದಿದ ಸುಸಂಸ್ಕೃತ, ಮೌಲ್ಯಾಧಾರಿತ, ಸಂಪದ್ಭರಿತ ದೇಶ. ಈ ಪುಣ್ಯ, ಪವಿತ್ರ ಭೂಮಿಯಲ್ಲಿ ಜನಿಸಿದ ಪ್ರತಿಯೊಬ್ಬ ಭಾರತೀಯನೂ ದೇಶಾಭಿಮಾನಿಯಾಗಿರಬೇಕು. ಈನಿಟ್ಟಿನಲ್ಲಿ ರಾಷ್ಟ್ರಕ್ಕಾಗಿ ಸರ್ವತ್ಯಾಗ ಸಮರ್ಪಣಾ ಮನೋಭಾವ ಜಾಗೃತಗೊಳಿಸುವ ಕಾರ್ಯವನ್ನು ಆರ್‌ಎಸ್‌ಎಸ್ ಮಾಡುತ್ತದೆ ಎಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಧಾರವಾಡ ವಿಭಾಗದ ಪ್ರಮುಖ ಗುರುರಾಜ ಕುಲಕರ್ಣಿ ಅಭಿಪ್ರಾಯಪಟ್ಟರು.


ಅವರು ರಾಷ್ಟ್ರೀಯ ಸ್ವಯಂ ಸೇವಕ ಸಂಘದಿಂದ ಆರ್‌ಎಸ್‌ಎಸ್ ಶತಮಾನೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಪಥಸಂಚಲನ ಕಾರ್ಯಕ್ರಮದ ನಂತರ ತಾಯಿ ಪಾರ್ವತಿ ಮಕ್ಕಳ ಬಳಗದ ಮೈದಾನದಲ್ಲಿ ನಡೆದ ಸಭೆಯಲ್ಲಿ ಸ್ವಯಂಸೇವಕರನ್ನು ಉದ್ದೇಶಿಸಿ ಮಾತನಾಡಿದರು.



ಡಾ.ಕೇಶವ ಬಲಿರಾಂ ಹೆಡ್ಗೆವಾರ್ ಅವರು ಹಿಂದೂಗಳನ್ನು ಮತ್ತು ಹಿಂದೂ ರಾಷ್ಟ್ರದ ಪರಿಕಲ್ಪನೆಯನ್ನು ಜಾಗೃತಗೊಳಿಸುವ ಮತ್ತು ದೇಶವನ್ನು ಪರಮ ವೈಭವದತ್ತ ಕೊಂಡೊಯ್ಯುವ ಉದ್ದೇಶದಿಂದ ಸಂಘ ಹುಟ್ಟು ಹಾಕಿದ್ದಾರೆ. ಅವರು ವ್ಯಕ್ತಿ ನಿರ್ಮಾಣದ ಮೂಲಕ ಸುಸಂಸ್ಕೃತ, ಸಮೃದ್ಧ ದೇಶ ಕಟ್ಟುವ ಸಂಕಲ್ಪದೊಂದಿಗೆ ಭಾರತ ಎನ್ನುವ ಮಹಾ ಮನೆಯ ಮಗ ಹಿಂದೂ ಆಗಿದ್ದು, ಎಲ್ಲ ಹಿಂದೂಗಳನ್ನು ಒಗ್ಗೂಡಿಸುವ ಕಾರ್ಯಕ್ಕೆ ಮುಂದಾದರು. ಭಾರತ ಮಾತೆಯ ಪರಮ ವೈಭವಕ್ಕಾಗಿ ಅಹರ್ನಿಸಿ ಶ್ರಮಿಸುತ್ತಿರುವ ಆರ್‌ಎಸ್‌ಎಸ್‌ನ ಶಕ್ತಿ ಕುಗ್ಗಿಸಲು ನಡೆಸುತ್ತಿರುವ ಷಡ್ಯಂತ್ರ ನಡೆಯುತ್ತಿಲ್ಲ. ಬದಲಾಗಿ ಸಂಘದ ಸತ್ಯ ಶುದ್ಧ ಚಿಂತನೆಯಿಂದ ಸಂಘ ಸಾಗರೋಪಾದಿಯಲ್ಲಿ ಬೆಳೆಯುತ್ತಿದೆ. ಸಂಘದ ಧ್ಯೇಯೋದ್ದೇಶಗಳ ಒಳಹೊಕ್ಕು ನೋಡಿದರೆ ವಿರೋಧಿಸುವವರೂ ಪ್ರೀತಿಸಿ ಅಭಿಮಾನಿಸುತ್ತಾರೆ. ಎಲ್ಲರೂ ಸ್ವದೇಶಿ ಜೀವನ ಶೈಲಿಯನ್ನು ಬದುಕಿನಲ್ಲಿ ಅಳವಡಿಸಿಕೊಳ್ಳೋಣ ಎಂದರು.

ಆರ್‌ಎಸ್‌ಎಸ್ ಸಂಘಟನೆ ಯುವಕರನ್ನು ಶಾರೀರಿಕ, ಬೌದ್ಧಿಕ ಮತ್ತು ಮಾನಸಿಕವಾಗಿ ಸದೃಢರನ್ನಾಗಿಸುವ ಉದ್ದೇಶ ಹೊಂದಿ ಆ ದಿಸೆಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ▶▶ 3ನೇ ಪುಟಕ್ಕೆ

> ಗಂಜಿಗಟ್ಟಿಯ ಡಾ. ವೈಜನಾಥ ಶಿವಲಿಂಗೇಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿ, ಜ್ಯಾತ್ಯಾತೀತವಾಗಿ ಸಂಘ ಹುಟ್ಟಿ ಬೆಳೆಯುತ್ತಲೇ ಇದೆ. ಸಂಘ ಎಂತಹ ವಿರೋಧಕ್ಕೂ ಪ್ರತಿಕ್ರಿಯಿಸದೇ ಪರಿಪೂರ್ಣ ವ್ಯಕ್ತಿತ್ವದ ಪ್ರಜೆಯನ್ನು ನಿರ್ಮಿಸುವ ಕಾರ್ಯ ಮಾಡುತ್ತಿದೆ. ಈ ದೇಶದ ನೆಲ, ಜಲ, ಭಾಷೆ, ಸಂಸ್ಕೃತಿ ಉಳಿಸುವ ಕಾರ್ಯ ಮಾಡುತ್ತಿದೆ. ಸಂಸ್ಕಾರ, ಧರ್ಮ, ಸಂಪ್ರದಾಯ, ಸಂಸ್ಕೃತಿ ಹೊಂದಿದ ಭವ್ಯ ಭಾರತ ರಾಷ್ಟ್ರ ನಿರ್ಮಾಣಕ್ಕಾಗಿ ಎಲ್ಲರೂ ಸಮರ್ಪಣಾ ಮನೋಭಾವ ಮೆರೆಯಬೇಕಾಗಿದೆ ಎಂದರು.

# ಐಎಂಎ ಪದಾಧಿಕಾರಿಗಳ ಪದಗ್ರಹಣ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಐಎಂಎ ಗದಗ ಶಾಖೆಯ ಶತಮಾನೋತ್ಸವ ವರ್ಷದ 2025–26ನೇ ಸಾಲಿನ ನೂತನ ಅಧ್ಯಕ್ಷರಾಗಿ ಡಾ. ಶ್ರೀಧರ ವ್ಹಿ.ಕುರಡಗಿ, ಕಾರ್ಯದರ್ಶಿಯಾಗಿ ಡಾ. ರಾಹುಲ್ ಶಿರೋಳ, ಖಜಾಂಚಿಯಾಗಿ ಡಾ. ಜಯರಾಜ ಪಾಟೀಲ ಆಯ್ಕೆಯಾಗಿದ್ದಾರೆ. ಐಎಂಎ ಗದಗ ಶಾಖೆಯ ಮಹಿಳಾ ಘಟಕದ ಅಧ್ಯಕ್ಷರಾಗಿ ಡಾ. ಸುನೀತಾ ಎಸ್. ಕುರಡಗಿ, ಕಾರ್ಯದರ್ಶಿಯಾಗಿ ಡಾ. ಸಪನಾ ಜೋಷಿ, ಖಜಾಂಚಿಯಾಗಿ ಡಾ. ಜ್ಯೋತಿ ಪಾಟೀಲ ಆಯ್ಕೆಯಾಗಿದ್ದಾರೆ. ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ಅ. 14ರಂದು ಸಂಜೆ 7 ಗಂಟೆಗೆ ನಗರದ ಕ್ಲಾರ್ಕ್ಸ್ ಇನ್ ಹೋಟೇಲ್ ಸಭಾಂಗಣದಲ್ಲಿ ಜರುಗಲಿದೆ. ಮುಖ್ಯ ಅತಿಥಿಗಳಾಗಿ ಡಿಡಿ ಚಂದನ ವಾಹಿನಿಯ 'ಥಟ್ ಅಂತ ಹೇಳಿ' ರಸಪ್ರಶ್ನೆ ಕಾರ್ಯಕ್ರಮದ ಜನಪ್ರಿಯ ನಿರೂಪಕ, ತಜ್ಞ ವೈದ್ಯರಾದ ಡಾ. ನಾ.ಸೋಮೇಶ್ವರ್ ಆಗಮಿಸುವರು. ಐಎಂಎ ರಾಜ್ಯ ಘಟಕದ ನಿಕಟಪೂರ್ವ ಅಧ್ಯಕ್ಷ ಡಾ. ಮಧುಸೂಧನ್ ಕಾರಿಗನೂರ ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರಿಸುವರು. ಗದಗ ಐಎಂಎ ಸದಸ್ಯರು ಸಕಾಲಕ್ಕೆ ಆಗಮಿಸುವಂತೆ ಐಎಂಎ ಪ್ರಕಟಣೆ ಕೋರಿದೆ.

# ರೈತರಿಗಾಗುವ ಮೋಸವನ್ನು ತಪ್ಪಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರು ಬೆಳೆದ ಗೋವಿನಜೋಳವನ್ನು ಪಟ್ಟಣದ ಎಪಿಎಂಸಿ ಮಾರುಕಟ್ಟೆಯಲ್ಲಿ ಇ–ಟೆಂಡರ್ ಮೂಲಕ ಮಾರಾಟ ಮಾಡಲು ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿ ಸೋಮವಾರ ಕೃಷಿಕ ಸಮಾಜದ ತಾಲೂಕು ಘಟಕದ ಅಧ್ಯಕ್ಷ ಚನ್ನಪ್ಪ ಷಣ್ಮುಖಿ ತಹಸೀಲ್ದಾರ ಮತ್ತು ಎಪಿಎಂಸಿ ಕಾರ್ಯದರ್ಶಿ ರುದ್ರಗೌಡ ಪಾಟೀಲ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಚನ್ನಪ್ಪ ಷಣ್ಮುಕಿ, ಗೋವಿನಜೋಳದ ಸೀಜನ್ ಆರಂಭ ಆಗುತ್ತಿದ್ದಂತೆ ಯಾವುದೇ ಪರವಾನಿಗೆ ಇಲ್ಲದ ಖರೀದಿದಾರರು ನೇರವಾಗಿ ರೈತರ ಮನೆ ಮತ್ತು ಕಣಗಳಿಗೆ ತೆರಳಿ ಖರೀದಿ ಮಾಡಲು ಮುಂದಾಗುತ್ತಾರೆ. ಹೀಗೆ ಖರೀದಿ ಮಾಡುವ ಖರೀದಿದಾರರಿಂದ ರೈತರಿಗೆ ತೂಕದಲ್ಲಿ ಮೋಸ ಆಗುತ್ತಿದೆ. ಅಲ್ಲದೆ ಫಸಲು ಖರೀದಿಸಿದ ನಂತರ ಪೂರ್ಣ ಹಣ ನೀಡದೆ ಸ್ವಲ್ಪ ಹಣ ಕೊಟ್ಟು ಉಳಿದ ಹಣವನ್ನು ಒಂದು ವಾರದಲ್ಲಿ ಕೊಡುವುದಾಗಿ ಹೇಳುತ್ತಾರೆ. ಆದರೆ ವಾರದ ನಂತರ ಅವರು ರೈತರ ಸಂಪರ್ಕ ಸಿಗುವುದೇ ಇಲ್ಲ.

ಕಷ್ಟಪಟ್ಟು ಬೆಳೆ ಬೆಳೆದ ರೈತ ವಿನಾಕಾರಣ ತೊಂದರೆ ಅನುಭವಿಸಬೇಕಾಗಿದೆ. ಕಳೆದ ಹಲವಾರು ವರ್ಷಗಳಿಂದ ಇಂಥ ಖರೀದಿದಾರರಿಂದ ರೈತರು ಮೋಸ ಹೋಗಿರುವ ಉದಾಹರಣೆಗಳು ಸಾಕಷ್ಟಿವೆ. ಇನ್ನು ಮುಂದೆ ಹೊರಗಡೆ ಗೋವಿನಜೋಳದ ಖರೀದಿಗೆ ಅವಕಾಶ ಕೊಡದೆ ಎಪಿಎಂಸಿಯಲ್ಲೇ ಖರೀದಿ ಆಗುವಂತೆ ಕ್ರಮ ಕೈಗೊಳ್ಳಬೇಕು. ರೈತರಿಗೆ ಮೋಸ ಮಾಡುವವರನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗಂಗನಗೌಡ ಪಾಟೀಲ, ಬಸವರಾಜ ಸೊರಟೂರ, ಮುತ್ತಪ್ಪ ಮಡಿವಾಳರ, ಸಂಗಯ್ಯ ಹಿರೇಮಠ, ಸೋಮಣ್ಣ ಮೋಡಿ ಮತ್ತಿತರರು ಇದ್ದರು.

### ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ: 9ನೇ ದಿನದತ್ತ ಅಹೋರಾತ್ರಿ ಧರಣಿ

# ಬಂಜಾರರಿಗೆ ಮೋಸ ಮಾಡಿದ ಕಾಂಗ್ರೆಸ್ ಸರ್ಕಾರ

■ ವಿಜಯಸಾಕ್ಷಿ ಸುದ್ದಿ, ಗದಗ



ಪರಿಶಿಷ್ಟ ಜಾತಿಗಳಲ್ಲಿನ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣದ ವಿರುದ್ಧ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಜಿಲ್ಲಾ ಬಂಜಾರ ಸಮುದಾಯದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಡೆಯುತ್ತಿರುವ ಬೃಹತ್ ಪ್ರತಿಭಟನೆ ಮತ್ತು ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ 9ನೇ ದಿನದತ್ತ ತಲುಪಿದೆ.

ಸೋಮವಾರ ಗದಗ ಜಿಲ್ಲೆಯ 72 ತಾಂಡಾಗಳ ಪೈಕಿ ನಿಗದಿತ ವೇಳಾಪಟ್ಟಿಯಂತೆ ಗದಗ ತಾಲೂಕಿನ ಅಡವಿಸೋಮಾಪುರ (ಸಣ್ಣ ಹಾಗೂ ದೊಡ್ಡ ತಾಂಡಾ), ಮುಂಡರಗಿ ತಾಲೂಕಿನ ಮುರಡಿ, ದಿಂಡೂರ ತಾಂಡಾ, ಶಿರಹಟ್ಟಿ ತಾಲೂಕಿನ ಕೆರಳ್ಳಿ ತಾಂಡಾ, ಲಕ್ಷ್ಮೇಶ್ವರ ತಾಲೂಕಿನ ಅಡರಕಟ್ಟಿ ಮತ್ತು ಕೊಂಡಿಕೊಪ್ಪ ತಾಂಡಾ, ಗಜೇಂದ್ರಗಡ ತಾಲೂಕಿನ ಅಮರಗಟ್ಟಿ ಮತ್ತು ನರೇಗಲ್ ತಾಂಡಾಗಳ ಸಾವಿರಾರು ಬಂಜಾರರು ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಧರಣಿ ನಿರತರನ್ನು ಉದ್ದೇಶಿಸಿ ಮಾತನಾಡಿದ ಭಾರತ ಸರ್ಕಾರದ ಯುವಜನ ಸೇವಾ ಪ್ರಾಧಿಕಾರದ ಸದಸ್ಯ ಲೋಕೇಶ್ವರ ನಾಯ್ಕ ಎಂ, ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರವು ಅವೈಜ್ಞಾನಿಕ ಒಳಮೀಸಲಾತಿ ಜಾರಿಗೆ ತಂದಿದ್ದು, ಇದು ದೊಡ್ಡ ಮೋಸವಾಗಿದೆ. ಗದಗ ಜಿಲ್ಲೆಯಲ್ಲಿ ನಡೆಯುತ್ತಿರುವ ಹೋರಾಟ ರಾಜ್ಯ ಮಟ್ಟವಷ್ಟೇ ಅಲ್ಲದೆ, ದೇಶವ್ಯಾಪಿ ಹೋರಾಟಕ್ಕೆ ದಾರಿದೀಪವಾಗಲಿದೆ.

> ಪರಿಶಿಷ್ಟ ಜಾತಿಗಳ ಒಳಮೀಸಲಾತಿ ವರ್ಗೀಕರಣದಲ್ಲಿ ನಡೆಯುತ್ತಿರುವ ಅವೈಜ್ಞಾನಿಕ ಕ್ರಮದಿಂದ ಕೊಲಂಬೊ ಸಮುದಾಯದ ಜನರು ತೀವ್ರ ಅನ್ಯಾಯಕ್ಕೆ ಒಳಗಾಗಿದ್ದಾರೆ. ಸರ್ಕಾರವು ಒಳಮೀಸಲಾತಿ ವರ್ಗೀಕರಣದ ವೇಳೆ ನಿಜವಾದ ಸಾಮಾಜಿಕ ಹಾಗೂ ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸದೆ ರಾಜಕೀಯ ಒತ್ತಡದಡಿ ತೀರ್ಮಾನ ಕೈಗೊಂಡಿದೆ.
>
> **– ರವಿಕಾಂತ್ ಅಂಗಡಿ.**
> ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ
> ರಾಜ್ಯ ಪ್ರಧಾನ ಕಾರ್ಯದರ್ಶಿ.

ಕೊಲಂಬೊ ಸಮುದಾಯವು ಶತಮಾನಗಳಿಂದ ಹಿಂದುಳಿದ ಸಮಾಜವಾಗಿದ್ದು, ಶಿಕ್ಷಣ ಮತ್ತು ಉದ್ಯೋಗಾವಕಾಶಗಳಲ್ಲಿ ಇನ್ನೂ ಹಿಂದುಳಿದ ಸ್ಥಿತಿಯಲ್ಲಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ಕೈಗೊಂಡಿರುವ ಒಳಮೀಸಲಾತಿ ವರ್ಗೀಕರಣ ಕ್ರಮವು ಈ ಸಮುದಾಯದ ಹಕ್ಕುಗಳನ್ನು ಕಸಿದುಕೊಳ್ಳುವಂತಾಗಿದೆ ಎಂದು ಹೇಳಿದರು.

ಉದ್ಯಮಿ ಸೋನು ಲಮಾಣಿ ಮಾತನಾಡಿ, ರಾಜ್ಯಾದ್ಯಂತ ಕೊಲಂಬೊ ಸಮಾಜದ ಯುವಕರು ಹಾಗೂ ಹಿರಿಯರು ಸಂಘಟಿತವಾಗಿ ಹೋರಾಟ ಆರಂಭಿಸಿದ್ದು, ಸರ್ಕಾರವು ಒಳಮೀಸಲಾತಿ ವರ್ಗೀಕರಣವನ್ನು ಪುನರ್‌ಪರಿಶೀಲಿಸಿ ನ್ಯಾಯಯುತ ನಿರ್ಧಾರ ಕೈಗೊಳ್ಳಬೇಕು. ಸರ್ಕಾರದ ಗಮನ ಸೆಳೆಯಲು ಸದ್ಯದಲ್ಲೇ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಕಚೇರಿಗಳ ಎದುರು ಧರಣಿ ಮತ್ತು ಮನವಿ ಸಲ್ಲಿಕೆ ನಡೆಯಲಿದೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ರವಿಕಾಂತ್ ಅಂಗಡಿ, ಕೆ.ಸಿ. ನಭಾಪುರ, ಪರಮೇಶ್ ನಾಯಕ್, ಚಂದು ನಾ ಂ ು ಂ ಕ್, ▶▶ 3ನೇ ಪುಟಕ್ಕೆ

## ನರೇಗಾ ಇ-ಕೆವೈಸಿ ಮಾಡಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಾ ಯೋಜನೆಡಿಯಲ್ಲಿ ಇರುವ ಯೋಜನೆಗಳ ಲಾಭ ಪಡೆಯಲು ನರೇಗಾ ಜಾಬ್ ಕಾರ್ಡ್ ಹೊಂದಿರುವವರು ತಕ್ಷಣ ಇ-ಕೆವೈಸಿ ಮಾಡಿಸಬೇಕೆಂದು ಅಬ್ಬಿಗೆರೆ ಗ್ರಾ.ಪಂ ಪಿಡಿಓ ಲೋಹಿತ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮೊದಲ ಹಂತದಲ್ಲಿ ರಾಜ್ಯದಲ್ಲಿ ಇದನ್ನು ಐದು ಜಿಲ್ಲೆಗಳಲ್ಲಿ ಜಾರಿಗೆ ತರಲಾಗಿದೆ. ನರೇಗಾ ಜಾಬ್ ಕಾರ್ಡ್ ಹೊಂದಿರುವ ಎಲ್ಲ ನಾಗರಿಕರು ಅಕ್ಟೋಬರ್ 30ರೊಳಗೆ ನಿಮ್ಮ ಜಾಬ್ ಕಾರ್ಡ್ ಮತ್ತು ಆಧಾರ್ ಕಾರ್ಡ್‌ನೊಂದಿಗೆ ಬಂದು ಸುಲಭವಾಗಿ ಕೆವೈಸಿ ಮಾಡಿಸಬಹುದೆಂದು ತಿಳಿಸಿದ್ದಾರೆ.

ಇ-ಕೆವೈಸಿ ಮಾಡಿಸುವುದರಿಂದ ನಿಮಗೆ ಪ್ರತಿ ದಿನಕ್ಕೆ 370ರೂ. ನಂತೆವರ್ಷಕ್ಕೆ 100 ದಿನಗಳ ಉದ್ಯೋಗ ಸಿಗುತ್ತದೆ. ನರೇಗಾ ಯೋಜನೆಡಿಯಲ್ಲಿನ ಎಲ್ಲ ಲಾಭಗಳನ್ನೂ ಪಡೆದುಕೊಳ್ಳಬಹುದು. ಹೊಸದಾಗಿ ಯಾರಾದರೂ ಅರ್ಜಿ ಸಲ್ಲಿಸುವವರಿದ್ದರೆ ನಿಮ್ಮ ರೇಷನ್ ಕಾರ್ಡ್, ಮೊಬೈಲ್ ನಂಬರ್, ಬ್ಯಾಂಕ್ ಪಾಸ್‌ಬುಕ್‌ನ ಜೆರಾಕ್ಸ್, ಆಧಾರ್ ಕಾರ್ಡ್, ಫೋಟೋ ತೆಗೆದುಕೊಂಡು ಬಂದು ಹೊಸ ಕಾರ್ಡ್ ಮಾಡಿಸಬಹುದೆಂದಿದ್ದಾರೆ.

ನರೇಗಾ ಯೋಜನೆಯಡಿಯಲ್ಲಿ ಕಾರ್ಡ್ ಹೊಂದಿರುವವರು ಬೇಗನೆ ಇ-ಕೆವೈಸಿ ಮಾಡಿಸಿರಿ ಎಂಬ ಜಾಗೃತಿಯನ್ನು ಮೂಡಿಸಲು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲಲಿತಾ ರಾಠೋಡ, ಉಪಾಧ್ಯಕ್ಷೆ ತೆಗ್ಗಿನಕೇರಿ ಮತ್ತಿತರ ಎಲ್ಲ ಸದಸ್ಯರು, ಸಿಬ್ಬಂದಿ, ಸಂಜೀವಿನಿ ಒಕ್ಕೂಟದ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದು, ಘೋಷಣಾ ಪತ್ರಗಳನ್ನು ಪ್ರದರ್ಶಿಸಿದರು.

## ಕುಸ್ತಿ ಪಂದ್ಯಾವಳಿಯಲ್ಲಿ ಬಹುಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗಾಂಧಿನಗರ ಯುವಜನ ಸಂಘ ಸಾಗರ ಇವರು ಏರ್ಪಡಿಸಿದ್ದ 50ನೇ ವರ್ಷದ ದಸರಾ ಕುಸ್ತಿ ಪಂದ್ಯಾವಳಿಯಲ್ಲಿ ಮನೋರಮಾ ಕಾಲೇಜಿನ ಬಿಸಿಎ ವಿಭಾಗದ ವಿದ್ಯಾರ್ಥಿನಿ ಪ್ರಿಯಾಂಕಾ ಕರಿಗಾರ ಭಾಗವಹಿಸಿ ಪ್ರಥಮ ಸ್ಥಾನ ಹಾಗೂ 18 ಸಾವಿರ ರೂ ನಗದು ಬಹುಮಾನ ಪಡೆದುಕೊಂಡಿದ್ದಾಳೆ.

ಸಾಧನೆಗೈದ ವಿದ್ಯಾರ್ಥಿನಿಗೆ ಹಾಗೂ ಕಾಲೇಜಿನ ದೈಹಿಕ ನಿರ್ದೇಶಕ ಖಯೂಮ ನವಲೂರರಿಗೆ ಸಂಸ್ಥೆಯ ಚೇರಮನ್ ಎನ್.ಎಮ್ ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರುಗಳಾದ ಪ್ರೊ. ಸವಿತಾ ಪೂಜಾರ, ಪ್ರೊ. ಪ್ರಿಯಾಂಕಾ ಕಬಾಡಿ, ಪ್ರೊ. ಯಶವಂತ ಕಲಬುರ್ಗಿ, ಪ್ರೊ. ಶಾಹಿದಾ ಶಿರಹಟ್ಟಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.


### ಐಎಂಎ ಗದಗ ಶಾಖೆಯ ನೂತನ ಪದಾಧಿಕಾರಿಗಳ ಪದಗ್ರಹಣ

# ನಗರಕ್ಕಿಂದು ಡಾ. ನಾ.ಸೋಮೇಶ್ವರ, ಡಾ. ಕಾರಿಗನೂರ

ಬೆಂಗಳೂರಿನ ಡಾ. ಎನ್.ಎ. ಸೋಮೇಶ್ವರ ಅವರು ವೈದ್ಯಕೀಯ ಕ್ಷೇತ್ರದಲ್ಲಿ ಮಾತ್ರವಲ್ಲ, ಸಾಹಿತಿಯಾಗಿ, ಸಂವಹನಕಾರರಾಗಿಯೂ ರಾಜ್ಯದ ಜನಮನ ಸೆಳೆದವರು. ದೂರದರ್ಶನ ಚಂದನ ವಾಹಿನಿಯ 'ಥಟ್ ಅಂತ ಹೇಳಿ' ರಸಪ್ರಶ್ನೆ ಕಾರ್ಯಕ್ರಮದ ಜನಪ್ರಿಯ ನಿರೂಪಕರಾಗಿರುವ ಡಾ. ನಾ.ಸೋಮೇಶ್ವರ ಅ. 14ರಂದು ಗದುಗಿಗೆ ಆಗಮಿಸಲಿದ್ದಾರೆ.

ಮೇ 14, 1955ರಂದು ಬೆಂಗಳೂರಿನಲ್ಲಿ ಜನಿಸಿದ ಡಾ. ಸೋಮೇಶ್ವರ್ ವೈದ್ಯ, ಲೇಖಕ ಮತ್ತು ಸಂವಹನಕಾರರಾಗಿದ್ದು, ವಿಜ್ಞಾನವನ್ನು ಸರಳ ಮತ್ತು ಅರ್ಥಪೂರ್ಣವಾಗಿಸಲು ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದಾರೆ. ಬಿ.ಎಸ್ಸಿ ಮತ್ತು ಎಂಬಿಬಿಎಸ್ ಗಳಿಸಿದ ನಂತರ ಮತ್ತು ಚೆನ್ನೈನ ಎಸ್‌ಆರ್‌ಎಂ ವಿಶ್ವವಿದ್ಯಾಲಯದಲ್ಲಿ ಔದ್ಯೋಗಿಕ ಔಷಧದಲ್ಲಿ ಉನ್ನತ ಅಧ್ಯಯನವನ್ನು ಪೂರ್ಣಗೊಳಿಸಿದ ನಂತರ, ಅವರು ರವಿ ಕಿರ್ಲೋಸ್ಕರ್ ಆಸ್ಪತ್ರೆ, ವಿಡಿಯಾ ಇಂಡಿಯಾ, ಅಸ್ಟ್ರಾಜೆನೆಕಾ ಮತ್ತು ಐಟಿಸಿಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದರು.

ವೈದ್ಯ ವೃತ್ತಿಯೊಂದಿಗೆ ಸಾಹಿತ್ಯಿಕ ಕೃತಿ ಪ್ರಕಟಿಸಿದ್ದಾರೆ. ಬರವಣಿಗೆ ಮತ್ತು ಸಾರ್ವಜನಿಕ ಶಿಕ್ಷಣ ಕ್ಷೇತ್ರಕ್ಕೆ





ಅನುಪಮ ಸೇವೆ ಸಲ್ಲಿಸಿರುವ ಇವರು 70ಕ್ಕೂ ಹೆಚ್ಚು ಆರೋಗ್ಯ ಸಂಬಂಧಿತ ಪುಸ್ತಕಗಳನ್ನು ಬರೆದಿದ್ದಾರೆ, ಸಂಕೀರ್ಣ ವೈದ್ಯಕೀಯ ಸಂಗತಿಗಳನ್ನು ಪ್ರತಿಯೊಬ್ಬ ಓದುಗರಿಗೂ ಅರ್ಥವಾಗುವ ಪದಗಳಾಗಿ ಪರಿವರ್ತಿಸಿದ್ದಾರೆ. ಎರಡು ದಶಕಗಳಿಗೂ ಹೆಚ್ಚು ಕಾಲ, ಅವರು ಉತ್ತರ ಕರ್ನಾಟಕದಾದ್ಯಂತ ಪ್ರಯಾಣಿಸಿ ಸ್ಮರಣೆ ಮತ್ತು ಕಲಿಕೆಯ ಕುರಿತು ಮಾಸಿಕ ಭಾಷಣಗಳನ್ನು ನೀಡಿದ್ದಾರೆ.

ಕನ್ನಡ ರಸಪ್ರಶ್ನೆ ಕಾರ್ಯಕ್ರಮದ ಸೃಷ್ಟಿಕರ್ತ ಮತ್ತು ನಿರೂಪಕರಾಗಿ, ಅವರು 23 ವರ್ಷಗಳಿಂದ ನಿರಂತರ ಮನೆಗಳಿಗೆ ಸಂತೋಷ ಮತ್ತು ಜ್ಞಾನವನ್ನು ತಂದಿದ್ದಾರೆ. 5 ಸಾವಿರ ಸಂಚಿಕೆಗಳನ್ನು ಪೂರ್ಣಗೊಳಿಸಿದ್ದಾರೆ. ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಿಂದ ಗುರುತಿಸಲ್ಪಟ್ಟ ಈ ಸಾಧನೆ ಶೀಘ್ರದಲ್ಲೇ ಗಿನ್ನೆಸ್ ವಿಶ್ವ ದಾಖಲೆಗೆ ಸೇರಲಿದೆ. ಅವರ ಟ್ರೇಡ್‌ಮಾರ್ಕ್ ಪ್ರತಿ ಸರಿಯಾದ ಉತ್ತರಕ್ಕೂ ಕನ್ನಡ ಪುಸ್ತಕವನ್ನು ಉಡುಗೊರೆಯಾಗಿ ನೀಡುವುದು ಅವರನ್ನು ಪ್ರೀತಿಯಿಂದ ಕಲಿಯುವ ಸಂಕೇತವನ್ನಾಗಿ ಮಾಡಿದೆ.

ಇವರಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಅತ್ಯುತ್ತಮ ವೈದ್ಯಕೀಯ ಬರಹಗಾರ ಪ್ರಶಸ್ತಿ, ಬಹು ಜೀವಮಾನ ಸಾಧನೆ ಪ್ರಶಸ್ತಿಗಳು ಮತ್ತು ಪ್ರತಿಷ್ಠಿತ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ (2019) ಲಭಿಸಿವೆ. ಜಾಗತಿಕ ವೇದಿಕೆಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿ ಯು.ಎಸ್.ಎ ಕತಾರ್, ಸಿಂಗಾಪುರ ಮತ್ತು ಮಲೇಷ್ಯಾದಲ್ಲಿ ರಸಪ್ರಶ್ನೆಗಳು ಮತ್ತು ಉಪನ್ಯಾಸಗಳನ್ನು ನಡೆಸಿದ್ದಾರೆ ಮತ್ತು ಇತ್ತೀಚೆಗೆ ಕತಾರ್ ಕನ್ನಡ ಸಮ್ಮಾನ್ (2025)ನೊಂದಿಗೆ ಗೌರವಿಸಲ್ಪಟ್ಟಿದ್ದಾರೆ.

ಶಿಕ್ಷಕ, ವೈದ್ಯ ಮತ್ತು ಕನ್ನಡ ಮತ್ತು ವಿಜ್ಞಾನದ ದಣಿವರಿಯದ ಪ್ರವರ್ತಕ ಡಾ. ನಾ. ಸೋಮೇಶ್ವರ್ ಜ್ಞಾನ ಮತ್ತು ಸಾಮಾನ್ಯ ಮನಸ್ಸಿನ ನಡುವಿನ ಸೇತುವೆಯಾಗಿ ನಿಂತಿದ್ದಾರೆ. ಅವರು ತಮ್ಮ ಪತ್ನಿ ರುಕ್ಮಾವತಿ ಮತ್ತು ಮಗ ನಚಿಕೇತ ಅವರೊಂದಿಗೆ ಬೆಂಗಳೂರಿನಲ್ಲಿ ವಾಸಿಸುತ್ತಿದ್ದಾರೆ. ನಿಜವಾದ ಶಿಕ್ಷಣ ಎಂದರೆ ತಿಳಿದುಕೊಳ್ಳುವುದಲ್ಲ, ಹಂಚಿಕೊಳ್ಳುವುದೆಂದು ಸಾಬೀತುಪಡಿಸುವ ಡಾ. ನಾ. ಸೋಮೇಶ್ವರ್ ಅವರು ನಗರಕ್ಕೆ ಆಗಮಿಸುತ್ತಿರುವುದು ನಮಗೆಲ್ಲ ಸಂತೋಷ ತಂದಿದೆ.

ಡಾ.ಮಧುಸೂಧನ ಕಾರಿಗನೂರ ಬಳ್ಳಾರಿ ಜಿಲ್ಲೆಯ ಶಿರಗುಪ್ಪ ನಿವಾಸಿಯಾಗಿದ್ದು ವೈದ್ಯಕೀಯ, ಸಾಹಿತ್ಯ, ಸಾಮಾಜಿಕ ಕ್ಷೇತ್ರದ ಕ್ರಿಯಾಶೀಲ ಕಾರ್ಯ ಚಟುವಟಿಕೆಗಳಿಂದಾಗಿ ರಾಜ್ಯದಲ್ಲಿ ಹೆಸರು ಮಾಡಿದವರು. ಬಳ್ಳಾರಿಯ ಸರ್ಕಾರಿ ವೈದ್ಯಕೀಯ ಕಾಲೇಜ್‌ದಲ್ಲಿ 1993ರಲ್ಲಿ ಎಂ.ಬಿ.ಬಿ.ಎಸ್ ಹಾಗೂ 1999ರಲ್ಲಿ ವಿಜಯನಗರದ ವೈದ್ಯಕೀಯ ವಿಜ್ಞಾನ ಸಂಸ್ಥೆಯಿಂದ ಎಂ.ಎಸ್ ಪದವಿ ಮುಗಿಸಿದ್ದಾರೆ.

ವೈದ್ಯಕೀಯ ಸೇವೆಯೊಂದಿಗೆ 'ಸೃಜನ ಫೌಂಡೇಶನ್' ಮೂಲಕ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಮೂಲಭೂತ ಜೀವನ ಬೆಂಬಲಕ್ಕಾಗಿ ಶಿಕ್ಷಣಕ್ಕೆ ಪೂರಕವಾಗಿ ಕಾರ್ಯ ಮಾಡುತ್ತಿದ್ದಾರೆ. ಐಎಂಎ ಫೋಕಸ್ ಪತ್ರಿಕೆಯ ಸಂಪಾದಕರಾಗಿ, ಐಎಂಎ ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷರಾಗಿ, ಶಿರಗುಪ್ಪ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ, ಐಎಂಎ ಕೆಪಿಪಿಎಸ್ ಚೇರಮನ್‌ರಾಗಿ ಕ್ರಿಯಾಶೀಲತೆಯಿಂದ ಸಮಾಜಮುಖಿ, ಜನಮುಖಿಯಾಗಿ ಕಾರ್ಯ ಮಾಡಿದ್ದಾರೆ.

ಇವರ ವಿಭಿನ್ನ ಸೇವೆಗೆ ರಾಷ್ಟ್ರೀಯ, ರಾಜ್ಯಮಟ್ಟದ ಹತ್ತು ಹಲವಂಟು ಪ್ರಶಸ್ತಿಗಳು ಸಂದಿವೆ. ಇಂತಹ ಮಹನೀಯರು ಇಂದು ಗದುಗಿಗೆ ಆಗಮಿಸಿ ವೈದ್ಯ ಮಿತ್ರರಿಗೆ ಪ್ರೇರಣೆ ನೀಡುತ್ತಿರುವದು ಹೆಮ್ಮೆಯ ಸಂಗತಿ.

– ಡಾ. ಶ್ರೀಧರ ವ್ಹಿ.ಕುರಡಗಿ.

## 'ಸಾಯುವವರೆಗೂ ಹೋರಾಡುತ್ತೇನೆ..'; ಬಿಜೆಪಿ ವಿರುದ್ಧ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ವಾಗ್ದಾಳಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಐಆರ್‌ಸಿಟಿಸಿ ಹಗರಣ ಪ್ರಕರಣದಲ್ಲಿ ತಮ್ಮ, ತಮ್ಮ ತಂದೆ ಲಾಲು ಪ್ರಸಾದ್ ಯಾದವ್ ಮತ್ತು ತಾಯಿ ರಾಬ್ರಿ ದೇವಿ ವಿರುದ್ಧ ಆರೋಪ ಹೊರಿಸುವ ದೆಹಲಿ ನ್ಯಾಯಾಲಯದ ನಿರ್ಧಾರ-ಕ್ಕೆ ಆರ್‌ಜೆಡಿ ನಾಯಕ ಮತ್ತು ಬಿಹಾರದ ಮಾಜಿ ಉಪಮುಖ್ಯಮಂತ್ರಿ ತೇಜಸ್ವಿ ಯಾದವ್ ಸೋಮವಾರ ತೀವ್ರವಾಗಿ ಪ್ರತಿಕ್ರಿಯಿಸಿದ್ದಾರೆ. ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ತೇಜಸ್ವಿ ಯಾದವ್, "ಪ್ರಕರಣವನ್ನು ರಾಜಕೀಯ ಸೇಡು" ಎಂದು ಕರೆದರು.

ಕಾನೂನುಬದ್ಧವಾಗಿ ಮತ್ತು ರಾಜಕೀಯವಾಗಿ ಹೋರಾಡಲು ತಮ್ಮ ಪಕ್ಷದ ಬದ್ಧತೆಯನ್ನು ಪುನರುಚ್ಚರಿಸಿದ ಅವರು, "ಇದೆಲ್ಲವೂ ರಾಜಕೀಯ, ನಾನು ಬದುಕಿರುವವರೆಗೂ, ಬಿಜೆಪಿ ವಿರುದ್ಧ ಹೋರಾಡುತ್ತಲೇ ಇರುತ್ತೇನೆ. ನಾವು ಹೋರಾಡುತ್ತೇವೆ. ಇದು ಐತಿಹಾಸಿಕ ವಿಜಯವಾಗಿರುತ್ತದೆ" ಎಂದರು.

ದೆಹಲಿ ನ್ಯಾಯಾಲಯವು ತನ್ನ ತೀರ್ಪಿನಲ್ಲಿ, ಮೂವರು ಹಿರಿಯ ಆರ್‌ಜೆಡಿ ನಾಯಕರ ವಿರುದ್ಧ ವಿಚಾರಣೆಯನ್ನು ಮುಂದುವರಿಸಲು ಸಾಕಷ್ಟು ಆಧಾರಗಳನ್ನು ಕಂಡುಕೊಂಡಿದೆ. ಸಿಬಿಐ ತನಿಖೆ ನಡೆಸಿದ ಪ್ರಕರಣದಲ್ಲಿ, ಲಾಲು ಪ್ರಸಾದ್ ಯಾದವ್ ರೈಲ್ವೆ ಸಚಿವರಾಗಿದ್ದ 2004 ರಿಂದ 2009 ರವರೆಗೆ ಭಾರತೀಯ ರೈಲ್ವೆ ಅಡುಗೆ ಮತ್ತು ಪ್ರವಾಸೋದ್ಯಮ ನಿಗಮದ (ಐಆರ್‌ಸಿಟಿಸಿ) ಎರಡು ಹೋಟೆಲ್‌ಗಳ ನಿರ್ವಹಣಾ ಒಪ್ಪಂದಗಳನ್ನು ನೀಡುವಲ್ಲಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಲಾಗಿದೆ. ನ್ಯಾಯಾಲಯವು ಲಾಲು ವಿರುದ್ಧ ಕ್ರಿಮಿನಲ್ ದುರ್ನಡತೆ ಮತ್ತು ವಂಚನೆಗೆ ಸಂಚು ರೂಪಿಸಿದ ಆರೋಪ ಹೊರಿಸಿದರೆ, ರಾಬ್ರಿ ದೇವಿ ಮತ್ತು ತೇಜಸ್ವಿ ಯಾದವ್ ವಿರುದ್ಧ ವಂಚನೆ ಮತ್ತು ಕ್ರಿಮಿನಲ್ ಪಿತೂರಿ ಆರೋಪ ಹೊರಿಸಲಾಯಿತು.

## ಮರಕ್ಕೆ ಡಿಕ್ಕಿ ಹೊಡೆದ ಕ್ರೂಸರ್ ಗದುಗಿನ ತಾಯಿ-ಮಗ ಸ್ಥಳದಲ್ಲೇ ಸಾವು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯ ಗರಗ ಪೊಲೀಸ್ ಠಾಣೆ ವ್ಯಾಪ್ತಿಯ ಮುಲ್ಲಾ ಡಾಬಾ ಬಳಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಗದುಗಿನ ತಾಯಿ ಮತ್ತು ಮಗ ಸ್ಥಳದಲ್ಲೇ ಮೃತಪಟ್ಟಿರುವ ಭೀಕರ ಘಟನೆ ವರದಿಯಾಗಿದೆ.

ಕೊಲ್ಲಾಪುರದ ಮಹಾಲಕ್ಷ್ಮೀ ದೇವಿಯ ದರ್ಶನ ಪಡೆದು ಬಾಳು ಮಾಮಾನ ದೇವಾಲಯಕ್ಕೆ ಹೋಗಿ ಮರಳುತ್ತಿದ್ದ ಸಂದರ್ಭದಲ್ಲಿ ಕ್ರೂಸರ್ ವಾಹನ ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಡಿಕ್ಕಿ ಹೊಡೆದಿದೆ. ಈ ಅಪಘಾತದಲ್ಲಿ ಗದಗದ ಹುಡ್ಕೋ ಕಾಲನಿಯ ನಿವಾಸಿಗಳಾದ ಮಹಾಂತಮ್ಮ ಬಸವಣೆಪ್ಪ ತುಪ್ಪದ (95)



ಹಾಗೂ ಅವರ ಪುತ್ರ ಸುರೇಶ ಬಸವಣೆಪ್ಪ ತುಪ್ಪದ (52) ಮೃತಪಟ್ಟಿದ್ದಾರೆ. ಕ್ರೂಸರ್‌ನಲ್ಲಿದ್ದ ಮಕ್ಕಳು, ಮಹಿಳೆಯರು ಸೇರಿ ಹತ್ತಕ್ಕೂ ಹೆಚ್ಚು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಘಟನೆಯ ಮಾಹಿತಿ ಪಡೆದ ಗರಗ ಠಾಣೆಯ ಪೊಲೀಸರು ಕೂಡಲೇ ಸ್ಥಳಕ್ಕೆ ಧಾವಿಸಿ, ಗಾಯಾಳುಗಳನ್ನು ಧಾರವಾಡದ ಆಸ್ಪತ್ರೆಗೆ ದಾಖಲಿಸಿದ್ದಾರೆ. ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ.

### ಮುಸ್ಲಿಂ ಸಮಾಜದ ವೇದಿಕೆಯಿಂದ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಮನವಿ

# ಶೇ. 15 ಅನುದಾನ ಮೀಸಲಿಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದಲ್ಲಿ ವಾಸಿಸುತ್ತಿರುವ ಅಲ್ಪಸಂಖ್ಯಾತ ಸಮುದಾಯದ ಜನರ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಸಮೀಕ್ಷೆ ನಡೆಸಲು 2006ರಲ್ಲಿ ಅಂದಿನ ಕೇಂದ್ರ ಸರ್ಕಾರ ಡಾ. ರಾಜೇಂದ್ರ ಸಚಾರ ಕಮಿಟಿ ನಡೆಸಿರುವ ಸಮೀಕ್ಷೆಯಂತೆ ಗದಗ ಜಿಲ್ಲೆ ಮತ್ತು ಗದಗ-ಬೆಟಗೇರಿ ನಗರದ ಸ್ಥಳೀಯ ಸಂಸ್ಥೆಗಳಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಶೇ. 15ರಷ್ಟು ಪ್ರತ್ಯೇಕ ಅನುದಾನ ಮೀಸಲಿಡಬೇಕೆಂದು ಗದಗ-ಬೆಟಗೇರಿ ಮುಸ್ಲಿಂ ಸಮಾಜದ ವೇದಿಕೆಯಿಂದ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಮನವಿ ನೀಡಿ ಆಗ್ರಹಿಸಿದರು.

ಮುಸ್ಲಿಂ ಸಮುದಾಯವು ಅತ್ಯಂತ ಶೋಚನೀಯವಾಗಿ ಬದುಕು ನಡೆಸುತ್ತಿರುವುದನ್ನು ಸಚಾರ ಕಮಿಟಿ ವರದಿಯ ಸಮೀಕ್ಷೆಯಲ್ಲಿ ತಿಳಿಸಲಾಗಿದೆ. ವರದಿಯಂತೆ ಪ್ರತ್ಯೇಕ ಅನುದಾನಕ್ಕಾಗಿ ಈ ಹಿಂದೆ ಗದಗ-ಬೆಟಗೇರಿಯ ಮುಸ್ಲಿಂ ಸಮುದಾಯದ ಸಂಘಟನೆಗಳಿಂದ ನಿರಂತರ ಹೋರಾಟಗಳನ್ನು ನಡೆಸಿ ಅಂದಿನ ರಾಜ್ಯ ಸರ್ಕಾರದ ಮೇಲೆ ಒತ್ತಡ ತರಲಾಗಿತ್ತು. ಅಂದು ನಡೆಸಿದ ನಿರಂತರ ಹೋರಾಟಗಳ ಪರಿಣಾಮ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮ ಅನುಷ್ಠಾನ ಸಮಿತಿಯನ್ನು ಪ್ರತಿ ಜಿಲ್ಲೆಯಲ್ಲಿ ರಚನೆ ಮಾಡಲಾಗಿದೆ. ಈ ಸಂದರ್ಭದಲ್ಲಿ ವೇದಿಕೆ ಮುಖಂಡರಾದ ಮಹ್ಮದಯುಸುಫ ನಮಾಜಿ, ಬಾಬಾಜಾನ ಬಳಗಾನೂರ, ಇಮ್ತಿಯಾಜ ಆರ್.ಮಾನ್ವಿ, ಅನ್ವರ ಶಿರಹಟ್ಟಿ, ಉಮರಫಾರುಖ ಹುಬ್ಬಳ್ಳಿ, ಮೆಹಬೂಬ ಮುಲ್ಲಾ, ರಫೀಕ ಜಮಾಲಖಾನವರ, ಜೀವನಸಾಬ ಉಮಚಗಿ, ಮಕ್ತುಮ ಮುಲ್ಲಾ, ನಿಜಾಮುದ್ದಿನ ಕಾತರಕಿ, ನಿಸಾರಖಾನ, ರಿಯಾಜ ಪಾಮಡಿ, ಖಾಜಾಸಾಬ ಇಸ್ಮಾಯಲನವರ, ರಜಾಕ ಸೂಡಿ ಮುಂತಾದವರು ಉಪಸ್ಥಿತರಿದ್ದರು.

> ಸಮಿತಿಯು ಕೇವಲ ಕಾಟಾಚಾರದ ಸಭೆ ಮತ್ತು ಕಾರ್ಯಕ್ರಮಗಳು ನಡೆಸುತ್ತಿರುವುದು ಖಂಡನೀಯ. ಇಲಾಖೆಯಿಂದ ನಡೆಸಲಾಗುತ್ತಿರುವ ಹಾಸ್ಟೇಲ್‌ಗಳಲ್ಲಿ ಸರ್ಕಾರದ ನಿಯಮದಂತೆ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಬೇಕು. ಇಲಾಖೆಯಿಂದ ನಡೆಸಲಾಗುತ್ತಿರುವ ಮಾಹಿತಿ ಕೇಂದ್ರದ ಮೂಲಕ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಕುರಿತು ಅಲ್ಪಸಂಖ್ಯಾತರ ಪ್ರದೇಶಗಳಲ್ಲಿ ಮಾಹಿತಿ ಕಾರ್ಯಕ್ರಮಗಳು ನಡೆಸಬೇಕು ಎಂದು ಒತ್ತಾಯಿಸಿದರು.

## 'ನೆಲದ ಕಾನೂನಿಗೆ ಬದ್ಧರಾಗಿರಬೇಕು ಅಥವಾ ಪರಿಣಾಮ ಎದುರಿಸಲು ಸಿದ್ಧರಾಗಿರಬೇಕು..'; ಬಿಜೆಪಿಗೆ ಪ್ರಿಯಾಂಕ್ ತಿರುಗೇಟು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸರ್ಕಾರಿ ಆವರಣದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಚಟುವಟಿಕೆಗಳನ್ನು ನಿಷೇಧಿಸುವಂತೆ ಕೋರಿ ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದ ನಂತರ ರಜ್ಯ ರಾಜಕಾರಣದಲ್ಲಿ ವಾಗ್ವಾದ ಭುಗಿಲೆದ್ದಿದೆ.

ಮುಖ್ಯಮಂತ್ರಿಗಳಿಗೆ ಪ್ರಿಯಾಂಕ್ ಬರದಿರುವ =ಪತ್ರದಲ್ಲಿ, ಸರ್ಕಾರಿ ಶಾಲೆಗಳು, ಆಟದ ಮೈದಾನಗಳು, ದೇವಾಲಯಗಳಲ್ಲಿ ಶಾಖೆಗಳು ಮತ್ತು ಕೂಟಗಳನ್ನು ನಡೆಸುವ ಮೂಲಕ ಆರ್‌ಎಸ್‌ಎಸ್ ಮಕ್ಕಳು



ಮತ್ತು ಯುವಕರಲ್ಲಿ ವಿಭಜಕ ವಿಚಾರಗಳನ್ನು ಹರಡುತ್ತಿದೆ ಎಂದು ಆರೋಪಿಸಿದ್ದಾರೆ. ಅಂತಹ ಕಾರ್ಯಕ್ರಮಗಳನ್ನು ಸಂವಿಧಾನಬಾಹಿರ ಮತ್ತು ರಾಷ್ಟ್ರೀಯ ಏಕತೆಯ ಮನೋಭಾವಕ್ಕೆ ವಿರುದ್ಧವೆಂದು ಕರೆದು ಅವುಗಳ ಮೇಲೆ ಸಂಪೂರ್ಣ ನಿಷೇಧ ಹೇರುವಂತೆ ಅವರು ಮುಖ್ಯಮಂತ್ರಿಯನ್ನು ಒತ್ತಾಯಿಸಿದರು.

ಇದಾದ ಸ್ವಲ್ಪ ಸಮಯದ ನಂತರ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿರುವ ಕರ್ನಾಟಕ ಬಿಜೆಪಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯದ ಗೃಹ ಸಚಿವರಾಗಿದ್ದಾಗ 2002 ರಲ್ಲಿ ಬೆಂಗಳೂರಿನ ನಾಗವಾರದಲ್ಲಿ ನಡೆದ ಆರ್‌ಎಸ್‌ಎಸ್ ಕಾರ್ಯಕ್ರಮಕ್ಕೆ ಭೇಟಿ ನೀಡಿದ ಹಳೆಯ ಛಾಯಾಚಿತ್ರವನ್ನು ಹಂಚಿಕೊಂಡಿದೆ.

## 'ಮತಗಳ್ಳತನ' ಕುರಿತ ರಾಹುಲ್ ಗಾಂಧಿಯ ಆರೋಪಗಳ ಎಸ್‌ಐಟಿ ತನಿಖೆ ಕೋರಿದ್ದ ಅರ್ಜಿ ವಜಾ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

2024ರ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಬೆಂಗಳೂರು ಕೇಂದ್ರ ಕ್ಷೇತ್ರದಲ್ಲಿ ದೊಡ್ಡ ಪ್ರಮಾಣದ 'ಮತಗಳ್ಳತನ' ನಡೆದಿದೆ ಎಂಬ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರ ಆರೋಪಗಳ ಕುರಿತು ವಿಶೇಷ ತನಿಖಾ ತಂಡದಿಂದ (ಎಸ್‌ಐಟಿ) ತನಿಖೆ ಮಾಡಿಸುವಂತೆ ಕೋರಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಸೋಮವಾರ (ಅ.13) ವಜಾಗೊಳಿಸಿದೆ.

ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಜೋಯ್ಮಲ್ಯ ಬಾಗ್ಚಿ ಅವರ ಪೀಠವು ಅರ್ಜಿದಾರರಿಗೆ ಈ ವಿಷಯವನ್ನು ಭಾರತೀಯ ಚುನಾವಣಾ ಆಯೋಗದ ಮುಂದೆ ಪ್ರಸ್ತಾಪಿಸುವಂತೆ ಹೇಳಿತು. ಅರ್ಜಿದಾರರ ಪರ ವಕೀಲರು, ಭಾರತೀಯ ಚುನಾವಣಾ ಆಯೋಗಕ್ಕೆ ಈಗಾಗಲೇ ಅರ್ಜಿ ಸಲ್ಲಿಸಲಾಗಿದೆ. ಆದರೆ, ಅದು ಇನ್ನೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ತಿಳಿಸಿದರು ಎಂದು ಲೈವ್ ಲಾ ವರದಿ ಮಾಡಿದೆ.

ಆದಾಗ್ಯೂ, ಅರ್ಜಿ ವಿಚಾರಣೆ ನಡೆಸಲು ನಿರಾಕರಿಸಿದ ಪೀಠ, ಅರ್ಜಿದಾರರು ಈ ವಿಷಯವನ್ನು ಚುನಾವಣಾ ಆಯೋಗದ ಮುಂದೆ ಮುಂದುವರಿಸಬಹುದು ಎಂದು ಹೇಳಿತು ಮತ್ತು ಅದನ್ನು ವಿಲೇವಾರಿ ಮಾಡಿತು. ಈ ವೇಳೆ, ಅರ್ಜಿದಾರರ ಪರ ವಕೀಲರು, ಈ ವಿಷಯವನ್ನು ನಿರ್ಧರಿಸಲು ಚುನಾವಣಾ ಆಯೋಗಕ್ಕೆ ಸಮಯ ಮಿತಿಯನ್ನು ನಿಗದಿಪಡಿಸುವಂತೆ ಕೋರಿದರು. ಆದರೆ, ಪೀಠವು ಅಂತಹ ಯಾವುದೇ ನಿರ್ದೇಶನವನ್ನು ನೀಡಲು ನಿರಾಕರಿಸಿತು ಎಂದು ಲೈವ್ ಲಾ ವರದಿ ವಿವರಿಸಿದೆ.

ರೋಹಿತ್ ಪಾಂಡೆ ಎಂಬವರು ಅರ್ಜಿ ಸಲ್ಲಿಸಿದ್ದರು. ಅರ್ಜಿಯಲ್ಲಿ, ನ್ಯಾಯಾಲಯದ ನಿರ್ದೇಶನಗಳನ್ನು ಪಾಲಿಸುವವರೆಗೆ ಮತ್ತು ಮತದಾರರ ಪಟ್ಟಿಗಳ ಸ್ವತಂತ್ರ ಪರಿಶೀಲನೆ ಪೂರ್ಣಗೊಳ್ಳುವವರೆಗೆ ಯಾವುದೇ ರೀತಿಯ ಪರಿಷ್ಕರಣೆ ಅಥವಾ ಅಂತಿಮಗೊಳಿಸುವಿಕೆ ಮಾಡಬಾರದು ಎಂದು ನಿರ್ದೇಶಿಸಲು ಕೋರಲಾಗಿತ್ತು.

### ಸಹಕಾರ ಸಂಘಗಳ ಕಾಯ್ದೆ ಕಲಂ 64ರಡಿ ವಿಚಾರಣೆಗೆ ಒಳಪಡಿಸಲು ಒತ್ತಾಯ

# 10 ಅಂಶಗಳಲ್ಲಿ ಕಾಯ್ದೆ ಉಲ್ಲಂಘನೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಇಲ್ಲಿಯ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಪತ್ತಿನ ಸಹಕಾರಿ ಸಂಘದಲ್ಲಿ ಬಿಡಿಪಿ ಮತ್ತು ಕೃಷಿಯೇತರ ಸಾಲಗಳಲ್ಲಿ ನಡೆದಿರುವ ಲಕ್ಷಾಂತರ ರೂಪಾಯಿ ಅವ್ಯವಹಾರಗಳನ್ನು ಸಹಕಾರ ಸಂಘಗಳ ಕಾಯ್ದೆ ಕಲಂ 64ರಡಿ ವಿಚಾರಣೆಗೆ ಒಳಪಡಿಸಬೇಕು ಮತ್ತು ಶೀಘ್ರವೇ ಆಡಳಿತಾಧಿಕಾರಿಗಳನ್ನು ನೇಮಿಸಬೇಕು ಎಂದು ಬ್ಯಾಂಕ್ ಸದಸ್ಯರು ಒತ್ತಾಯಿಸಿದರು.

ನಗರದ ಸಹಕಾರ ಸಂಘಗಳ ಸಹಾಯಕ ನಿಬಂಧಕರಿಗೆ ಮನವಿ ಸಲ್ಲಿಸಿ, ಬಳಿಕ ಪ್ರವಾಸಿ ಮಂದಿರ ಸಭಾಂಗಣದಲ್ಲಿ ಸೋಮವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ



ಹಿರಿಯ ವಕೀಲರಾದ ತಿಮ್ಮಲಾಪುರ ರವಿಶಂಕರ್ ಮಾತನಾಡಿ, ಸಂಘವು 10 ಅಂಶಗಳಲ್ಲಿ ಸಹಕಾರದ ಕಾಯ್ದೆ ಉಲ್ಲಂಘಿಸಿದೆ. ಸಹಕಾರ ಸಂಘದಿಂದ 7 ಕೋಟಿಗೂ ಅಧಿಕ ಹಣವನ್ನು ಬೇಕಾಬಿಟ್ಟಿಯಾಗಿ ನೀಡಿದ್ದು, ವಸೂಲಾತಿಯಲ್ಲಿ ಅವ್ಯವಹಾರ ಎಸಗಿದ್ದಾರೆ. ಕಾಯಕ ಯೋಜನೆಯಡಿ ರೂ.7.52 ಲಕ್ಷ, ಸ್ವಸಹಾಯ ಗುಂಪುಗಳ ಸಾಲದಲ್ಲಿ 14.14 ಲಕ್ಷ, ಸಂಘದ ಬಂಡವಾಳದಿಂದ ಬಿಡಿಪಿ ಸಾಲ 6.98 ಕೋಟಿ ರೂಪಾಯಿ ವಸೂಲು ಮಾಡಿಲ್ಲ ಎಂದು ಅಪಾದಿಸಿದರು.

2020-21ನೇ ಸಾಲಿನಲ್ಲಿ ಸಂಘವು 1.04,604 ನಿವ್ವಳ ಲಾಭಗಳಿಸಿತ್ತು. ಆದರೆ 2021ರಿಂದ 2025ರವರೆಗೆ ಒಟ್ಟು ರೂ.85.80 ಲಕ್ಷ ಕ್ರೋಢೀಕೃತ ನಷ್ಟ ತೋರಿಸಿದೆ. ಆದರೆ ಗೊಬ್ಬರ ಮಾರಾಟದ ಹಣ, ಇಸ್ಟಾಂಪ್, ಕಟ್ಟಡ ಬಾಡಿಗೆ ಹಣ ಎಲ್ಲಿಗೆ ಹೋಗಿದೆ ಎಂದು ಪ್ರಶ್ನಿಸಿದರು. 2025, ಮಾರ್ಚ್ 31ರ ಅಢಾವೆ ಪತ್ರಿಕೆ ಪ್ರಕಾರ ಠೇವಣಿ ರೂ.9.40 ಕೋಟಿ ಇದೆ. ಆ ಪೈಕಿ 7.36 ಕೋಟಿ ಕೈಸಾಲ ವಿತರಿಸಲಾಗಿದೆ. ಉಳಿಕೆ 2.03 ಕೋಟಿ ಹಣ ಖರ್ಚು-ವೆಚ್ಚದಲ್ಲಿ ನಷ್ಟ ಮಾಡಿರುವುದು ಲೆಕ್ಕಪರಿಶೋಧನೆ ವರದಿಯಿಂದ ತಿಳಿಯುತ್ತದೆ ಎಂದರು.

ನಿಯಮ ಉಲ್ಲಂಘಿಸಿ ಪಿಗ್ಮಿ ಕಮಿಷನ್ ಕೊಡಲಾಗುತ್ತಿದೆ. ಸಂಘವು ನೀಡಿರುವ ಬಿಡಿಪಿ ಸಾಲವು ಒಟ್ಟು ರೂ. 6.98 ಕೋಟಿ ವಸೂಲಿ ಮಾಡದೇ ಆಡಳಿತ ಮಂಡಳಿ ನಿರ್ಲಕ್ಷ್ಯ ವಹಿಸಿದೆ. ಕಟ್ಟಡದ ಬಾಡಿಗೆ ಹಣ ರೂ.10 ಲಕ್ಷವಿದೆ, ಗೊಬ್ಬರ ಮಾರಾಟದಿಂದ ಲಕ್ಷಾಂತರ ರೂಪಾಯಿ ಆದಾಯ ಬರುತ್ತಿದೆ. ಇಷ್ಟೆಲ್ಲಾ ಇದ್ದರೂ ಸಂಘವು ನಷ್ಟದಲ್ಲಿದೆ ಎಂದು ತೋರಿಸಲಾಗಿದೆ. ಸುಸ್ತಿ ಸಾಲ, ನಷ್ಟ ಮತ್ತು ಅನುತ್ಪಾದಕ ಆಸ್ತಿ ವಿಚಾರದ ಬಗ್ಗೆ ಪರಿಶೋಧಕರಾಗಲಿ, ಇಲಾಖೆ ಅಧಿಕಾರಿಗಳಾಗಲೀ ಪರಿಶೀಲಿಸಿಲ್ಲ ಎಂದು ಆರೋಪಿಸಿದರು.

ವಕೀಲರಾದ ಕೊಟ್ರೇಶ್, ಬ್ಯಾಂಕ್ ಸದಸ್ಯರಾದ ಬಾವಿಕಟ್ಟೆ ಭರಮಪ್ಪ, ಚಿಕ್ಕೇರಿ ವೆಂಕಟೇಶ್, ಪೂಜಾರ್ ನಾಗಪ್ಪ, ಜಿ. ಹನುಮಂತಪ್ಪ, ಜಿ. ವಿನಯಕುಮಾರ, ಟಿ. ಅಹಮದ್ ಹುಸೇನ್, ಜಿ. ಸುಜಾತ, ಗುಂಡಿ ಮಂಜಪ್ಪ, ಬಾರಿಕರ ರವಿ ಇತರರಿದ್ದರು.

## ಕಲಾವಿದರ ಸಂಘಟನೆಯ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕಲಾವಿದರ ಹಾಗೂ ಸಾಂಸ್ಕೃತಿಕ ಸಂಘಟನೆಗಳ ಹಿತರಕ್ಷಣಾ ವೇದಿಕೆಯ ವತಿಯಿಂದ ಗದಗ ಜಿಲ್ಲೆಯ ಕಲಾವಿದರ ಮತ್ತು ಸಾಂಸ್ಕೃತಿಕ ಸಂಘಟನೆಗಳ ಕುಂದು-ಕೊರತೆ ಹಾಗೂ ವಿವಿಧ ಬೇಡಿಕೆಗಳ ಕುರಿತು ಚರ್ಚಿಸಲು ಅ. 14ರಂದು ಬೆಳಿಗ್ಗೆ 11 ಗಂಟೆಗೆ ನಗರದ ಗದಗ ರೆಸ್ಟೋರೆಂಟ್ ಪಕ್ಕದಲ್ಲಿರುವ ನಟರಂಗ ಸಂಸ್ಥೆಯ ಸಭಾಭವನದಲ್ಲಿ ಸಭೆ ಕರೆಯಲಾಗಿದೆ.

ಜಿಲ್ಲೆಯ ಎಲ್ಲ ಕಲಾವಿದರು ಮತ್ತು ಸಾಂಸ್ಕೃತಿಕ ಸಂಘಟನೆಗಳ ಮುಖ್ಯಸ್ಥರು ಸಭೆಯಲ್ಲಿ ಪಾಲ್ಗೊಳ್ಳಲು ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಶಂಕ್ರಣ್ಣ ಸಂಕಣ್ಣವರ ವಿನಂತಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಶಂಕ್ರಣ್ಣ ಸಂಕಣ್ಣವರ ಮೊ.ನಂ-9740052017, ಮೌನೇಶ ಸಿ. ಬಡಿಗೇರ(ನರೇಗಲ್ಲ)-9972391031, ಸೋಮು ಚಿಕ್ಕಮಠ- 7899325108 ಹಾಗೂ ಶಿವು ಭಜಂತ್ರಿ- 9916209478 ಸಂಖ್ಯೆಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಸ್ವದೇಶಿ ಜೀವನ ಶೈಲಿಯನ್ನು ಅಳವಡಿಸಿಕೊಳ್ಳಿ

▶▶ ಮೊದಲನೇ ಪುಟದಿಂದ

ದೇಶದಲ್ಲಿ ಹಿಂದೂ ಮಠ-ಮಂದಿರಗಳ ಮೇಲೆ ಅವ್ಯಾಹತವಾಗಿ ಪಿತೂರಿ ನಡೆಯುತ್ತಿರುವದನ್ನು ಇತ್ತೀಚಿನ ಅನೇಕ ಘಟನೆಗಳಿಂದ ನೋಡಬಹುದಾಗಿದೆ. ಸಂಘ ಇದಾವುದನ್ನೂ ಗಮನಿಸದೇ ರಾಷ್ಟ್ರಾಭಿಮಾನ, ರಾಷ್ಟ್ರ ಪ್ರಜ್ಞೆ, ಸಾತ್ವಿಕ ಶಕ್ತಿ ಜಾಗೃತಗೊಳಿಸಿ ಬಲಿಷ್ಠ ರಾಷ್ಟ್ರ ನಿರ್ಮಾಣ ಮಾಡಲು ನಿರಂತರ ಶ್ರಮಿಸುತ್ತಿದೆ ಎಂದರು. ಗಜಾನನ ಹೆಗಡೆ, ಮಲ್ಲಿಕಾರ್ಜುನ ಹೂಗಾರ, ಚಂದ್ರು ಹಂಪಣ್ಣವರ ನಿರೂಪಿಸಿದರು. ತೆರೆದ ವಾಹನದಲ್ಲಿ ನಲ್ಲಿ ಭಾರತ ಮಾತೆಯ ಭಾವಚಿತ್ರ ಮೆರವಣಿಗೆ, ಚಕ್ಕಡಿಯಲ್ಲಿ ಅಖಂಡ ಭಾರತ ನಕ್ಷೆಯ ಭಾವಚಿತ್ರ ಮೆರವಣಿಗೆ ನಡೆಯಿತು. ಎಸ್‌ಪಿ ರೋಹನ್ ಜಗದೀಶ ನೇತೃತ್ವದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

ಬೆಳಗಾವಿ ವಿಭಾಗ ಮಟ್ಟದ ಪ್ರಾಥಮಿಕ, ಪ್ರೌಢಶಾಲಾ ವಿದ್ಯಾರ್ಥಿಗಳ ವಾಲಿಬಾಲ್ ಕ್ರೀಡಾಕೂಟ

# ಕ್ರೀಡೆಯೊಂದಿಗೆ ಶಿಕ್ಷಣಕ್ಕೆ ಒತ್ತು ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ




ಕ್ರೀಡೆ ಮನುಷ್ಯನ ಜೀವನದ ಅವಿಭಾಜ್ಯ ಅಂಗವಾಗಿದೆ. ಪ್ರತಿಯೊಬ್ಬ ವ್ಯಕ್ತಿಯೂ ಒಂದಿಲ್ಲೊಂದು ಕ್ರೀಡೆಯಲ್ಲಿ ಪ್ರತಿಭೆಯನ್ನು ಹೊಂದಿರುತ್ತಾನೆ. ಮಕ್ಕಳಲ್ಲಿನ ಪ್ರತಿಭೆಯನ್ನು ದೈಹಿಕ ಶಿಕ್ಷಣ ಶಿಕ್ಷಕರು ಗುರುತಿಸಿ ಅವರಿಗೆ ತರಬೇತಿಯನ್ನು ನೀಡಿದರೆ ಉತ್ತಮ ಕ್ರೀಡಾಪಟುಗಳಾಗಿ ಈ ನಾಡಿನ ಘನತೆಯನ್ನು ಬೆಳಗಬಲ್ಲರು ಎಂದು ಗದಗ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್ ಅಭಿಪ್ರಾಯಪಟ್ಟರು.

ನಗರದ ದಿ. ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಗದಗ ವತಿಯಿಂದ ಆಯೋಜಿಸಿದ್ದ 2025-26ನೇ ಸಾಲಿನ ಬೆಳಗಾವಿ ವಿಭಾಗ ಮಟ್ಟದ 14/17 ವಯೋಮಿತಿಯ ಪ್ರಾಥಮಿಕ, ಪ್ರೌಢಶಾಲಾ ಬಾಲಕ/ಬಾಲಕಿಯರ ವಾಲಿಬಾಲ್ ಕ್ರೀಡಾಕೂಟದಲ್ಲಿ ಕ್ರೀಡಾ ಧ್ವಜಾರೋಹಣ ನೆರವೇರಿಸಿ, ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಗಳಲ್ಲಿ ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಸರ್ಕಾರದಿಂದ ಪ್ರೋತ್ಸಾಹಧನ ನೀಡಲಾಗುತ್ತದೆ. ಕ್ರೀಡಾಪಟುಗಳಿಗೆ ಕ್ರೀಡಾ ವಸತಿ ನಿಲಯಗಳಲ್ಲಿ ನುರಿತ ತರಬೇತುದಾರರಿಂದ ಉನ್ನತ ಮಟ್ಟದ ಕೌಶಲಗಳ ತರಬೇತಿ ನೀಡಿ ಉತ್ತಮ ಕ್ರೀಡಾಪಟುಗಳನ್ನು ದೇಶಕ್ಕೆ ನೀಡಲಾಗುತ್ತಿದೆ. ಕ್ರೀಡಾಪಟುಗಳು ಕ್ರೀಡೆಯ ಜೊತೆಗೆ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿದಾಗ ಮಾತ್ರ ಜೀವನದಲ್ಲಿ ಮುಂದೆ ಬರಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಗದಗ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಭಾಗವಹಿಸಿ ಕ್ರೀಡಾ ಜ್ಯೋತಿ ಸ್ವೀಕರಿಸಿ ಕ್ರೀಡಾಪಟುಗಳಿಗೆ ಶುಭ ಕೋರಿದರು. ಮುಖ್ಯ ಅತಿಥಿಗಳಾಗಿ ಕೆಡಿಪಿ ನಾಮನಿರ್ದೇಶಿತ ಸದಸ್ಯ

ಗದಗ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳು ದುಶ್ಚಟಗಳಿಂದ ಮುಕ್ತರಾಗಿ ಸದೃಢ ದೇಹದ ಜೊತೆಗೆ ಸದೃಢ ಮನಸ್ಸು ಹೊಂದಿ ಸದೃಢ ಭಾರತ ನಿರ್ಮಾಣ ಮಾಡುವಲ್ಲಿ ಕೈಜೋಡಿಸಬೇಕು ಎಂದು ಕರೆ ನೀಡಿದರಲ್ಲದೆ, ಮೊಬೈಲ್ ಗೀಳಿನಿಂದ ಹೊರಬಂದು ಉತ್ತಮ ಜೀವನ ಸಾಗಿಸಿ ಎಂದರು.

ಎಸ್.ಎನ್. ಬಳ್ಳಾರಿ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ನಗರಾಭಿವೃದ್ಧಿ ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯ ಬಸವರಾಜ ಕಡೆಮನಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ವ್ಹಿ.ಎಂ. ಹಿರೇಮಠ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಬಿ.ಎಫ್. ಪೂಜಾರ, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ, ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವ್ಹಿ. ಶೆಟ್ಟೆಪ್ಪನವರ, ಎಂ.ಕೆ. ಲಮಾಣಿ, ಬಿ.ಕೆ. ನಿಂಬನಗೌಡ್ರ, ಹಾಲನಗೌಡ ಪಾಟೀಲ, ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಎನ್.ಆರ್. ನಿಡಗುಂದಿ, ಎಂ.ಎಸ್. ಕುಚಬಾಳ, ವಿ.ಎಫ್. ಕಲಕಂಬಿ, ರಾಜು ಚವ್ಹಾಣ, ಗದಗ ಶಹರ ಟಿಪಿಒ ಜೆ.ಬಿ. ಅಣ್ಣಿಗೇರಿ, ಪಿ.ಕೆ. ಅವರಡ್ಡಿ ಮುಂತಾದವರಿದ್ದರು.

ಬೆಳಗಾವಿ ವಿಭಾಗದ ಎಲ್ಲಾ ಜಿಲ್ಲೆಗಳಿಂದ ಕ್ರೀಡಾಪಟುಗಳು ಭಾಗವಹಿಸಿದ್ದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಸ್ವಾಗತಿಸಿದರು. ಯರಗುಡಿ ನಿರೂಪಿಸಿದರು. ಎಂ.ಎಸ್. ಕುಚಬಾಳ ವಂದಿಸಿದರು.

## ಉತ್ಸವ ಮೂರ್ತಿಗೆ ಪೂಜಾ ಕೈಂಕರ್ಯ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಬೆಟಗೇರಿ ಹೊಸಪೇಟ ಚೌಕದ ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ 2025ರ ಸಾಲಿನ ಶರನ್ನವರಾತ್ರಿ ಉತ್ಸವ ಕಾರ್ಯಕ್ರಮಕ್ಕಾಗಿ ಶ್ರೀ ಕಾಳಿಕಾ ದೇವಿ ಉತ್ಸವ ಮೂರ್ತಿಯನ್ನು ದೇವಸ್ಥಾನ ಟ್ರಸ್ಟ್ ಕಮಿಟಿಯ ನಿರ್ದೇಶಕರು ಹಾಗೂ ಪ್ರತಿಭಾನ್ವಿತ ಕಲಾವಿದ ಶ್ರೀಕಾಂತ ಎಮ್.ಬಡಿಗೇರ ಇವರಿಂದ ತಯಾರಿಸಲಾಗಿತ್ತು.

ಉತ್ಸವದ ತರುವಾಯ ಉತ್ಸವ ಮೂರ್ತಿಯನ್ನು ಕಾಷ್ಠ ಕೋಣೆಯ ಒಳಗೆ ಮುಂದಿನ ವರ್ಷದ ನವರಾತ್ರಿಯವರೆಗೆ ಭದ್ರವಾಗಿಡಲಾಗುತ್ತಿದ್ದು, ಪೂಜಾ ಕೈಂಕರ್ಯ ಮತ್ತು ಮುತ್ತೈದೆಯರಿಗೆ ಉಡಿ ತುಂಬುವ ಮೂಲಕ ಕಾರ್ಯವನ್ನು ನೆರವೇರಿಸಲಾಯಿತು. ಪೂಜಾ ಕಾರ್ಯದಲ್ಲಿ ಟ್ರಸ್ಟ್ ಅಧ್ಯಕ್ಷ ಶ್ರೀಧರ ಕೊಣ್ಣೂರ, ಸಮಾಜದ ಹಿರಿಯರಾದ ಪ್ರಕಾಶ ಬಡಿಗೇರ, ನಾರಾಯಣ ಕೊಣ್ಣೂರ, ಶಂಕರಪ್ಪ ಬಡಿಗೇರ, ಉಪಾಧ್ಯಕ್ಷ ಅಶೋಕ ಸುತಾರ, ಸಹಕಾರ್ಯದರ್ಶಿ ಗೋಪಾಲ ಬಡಿಗೇರ, ನಿರ್ದೇಶಕರಾದ ರಾಘವೇಂದ್ರ ಬಡಿಗೇರ, ಶ್ರೀಕಾಂತ ಬಡಿಗೇರ, ಅರ್ಚಕ ಸುರೇಶ ಬಡಿಗೇರ, ಉತ್ಸವ ಕಮಿಟಿಯ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಪತ್ತಾರ, ವಿನಾಯಕ ರಾಮದುರ್ಗಾ, ಮಂಜುನಾಥ ಬಡಿಗೇರ, ಸತೀಶ ಹೊರಪೇಟ, ವಿಶ್ವಕರ್ಮ ಗಾಯಿತ್ರಿ ಮಹಿಳಾ ಮಂಡಳದ ಗೌರವಾಧ್ಯಕ್ಷೆ ಶೋಭಾ ಬೆಂತೂರ, ಸದಸ್ಯರಾದ ಶಾರದಾ ಬಡಿಗೇರ, ಸರೋಜ ಬೆಂತೂರ, ಲಕ್ಷ್ಮೀ ಕೊಣ್ಣೂರ, ಕಸ್ತೂರಿ ಬಡಿಗೇರ, ಜಾಹ್ನವಿ ಬಡಿಗೇರ, ನಿಖಿತಾ ಸುಜಾತ ಬಡಿಗೇರ ಸುತಾರ, ಮಂಜುಳಾ ಪತ್ತಾರ, ಪೂರ್ಣಿಮಾ ಪತ್ತಾರ, ಗೀತಾ ಬೆಂತೂರ, ವಿಶ್ವನಾಥ ಕಮ್ಮಾರ ಉಪಸ್ಥಿತರಿದ್ದರು.

# ಆಕರ್ಷಕ ಆರ್‌ಎಸ್‌ಎಸ್ ಪಥಸಂಚಲನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ರಾಷ್ಟ್ರೀಯ ಸ್ವಯಂಸೇವಕ ಸಂಘ-ಆರ್‌ಎಸ್‌ಎಸ್‌ನ ಶತಮಾನೋತ್ಸವ ಸಂಭ್ರಮದ ಅಂಗವಾಗಿ ಪಟ್ಟಣದಲ್ಲಿ ರವಿವಾರ ಸಂಘದ ಸ್ವಯಂ ಸೇವಕರು ಆಕರ್ಷಕ ಪಥಸಂಚಲನ ನಡೆಸಿದರು. ನೂರಾರು ಸ್ವಯಂಸೇವಕರು ಪಥಸಂಚಲನದಲ್ಲಿ ಪಾಲ್ಗೊಂಡು ಗಮನ ಸೆಳೆದರು.

ಅತ್ಯಂತ ಶಿಸ್ತುಬದ್ಧವಾಗಿ ನಡೆದ ಪಥಸಂಚಲನ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಸೇರಿದಂತೆ ಅನೇಕ ಮುಖಂಡರು ಸ್ವಯಂ ಸೇವಕರೊಂದಿಗೆ ಪಥಸಂಚಲನದಲ್ಲಿ ಭಾಗಿಯಾದರು. ಪಟ್ಟಣದ ಪಂಪವೃತ್ತದ ಬಳಿ ಸೇರಿದ ಸ್ವಯಂಸೇವಕರು ಸರಿಯಾಗಿ 3.30ಕ್ಕೆ ಆರ್‌ಎಸ್‌ಎಸ್ ಗೀತೆಯೊಂದಿಗೆ ಪಥಸಂಚಲನ ಪ್ರಾರಂಭಿಸಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಮಾನೋತ್ಸವ ಅಂಗವಾಗಿ ಸ್ವಯಂ ಸೇವಕರು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಹಾಯ್ದು ಹೋಗುವ ರಸ್ತೆಯುದ್ದಕ್ಕೂ ಹೂವಿನ ಹಾಸಿಗೆ ಹಾಸಲಾಗಿತ್ತು. ಎಲ್ಲೆಡೆ ಮಹಿಳೆಯರು ರಂಗೋಲಿ ಬಿಡಿಸಿ, ಮಕ್ಕಳು ರಾಷ್ಟ್ರನಾಯಕರ ವೇಷಭೂಷಣ ಧರಿಸಿ ಗಮನ ಸೆಳೆದರು. ಪಟ್ಟಣದ ಮುಖ್ಯ ರಸ್ತೆಯಲ್ಲಿ ಪಥ ಸಂಚಲನ ಸಾಗುತ್ತಿದ್ದಾಗ, ಜನರು ಹೂ ಎರಚಿ ದೇಶಭಕ್ತಿಯ ಘೋಷಣೆಗಳನ್ನು ಕೂಗಿದರು.

ವಿವಿಧ ಸಂಘಟನೆಗಳು, ವ್ಯಾಪಾರಸ್ಥರು, ರಾಜಕೀಯ ಮುಖಂಡರು ಪಟ್ಟಣದ ಆಯಕಟ್ಟಿನ ಸ್ಥಳಗಳಲ್ಲಿ ಬ್ಯಾನರ್‌ಗಳನ್ನು ಹಾಕುವ ಮೂಲಕ ಪಥಸಂಚಲನಕ್ಕೆ ಸ್ವಾಗತ ಕೋರಿದ್ದರು. ಕಮಾನು, ಕಟೌಟ್, ಬಂಟಿಗ್ಸ್, ಬ್ಯಾನರ್, ಪತಾಕೆಗಳಿಂದ ಪಟ್ಟಣ ಸಂಪೂರ್ಣ ಕೇಸರಿಮಯವಾಗಿತ್ತು. ಪಥಸಂಚನ ಮಾರ್ಗದಲ್ಲಿ ಸ್ವಾತಂತ್ರ ಹೋರಾಟಗಾರರ ಭಾವಚಿತ್ರಗಳು, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಭಾವಚಿತ್ರ, ಶ್ರೀ ರಾಮ, ಶ್ರೀ ಆಂಜನೇಯ ದೇವರ ಕಟೌಟ್‌ಗಳನ್ನು ಅಳವಡಿಸಲಾಗಿತ್ತು. ಗಣವೇಷಧಾರಿ ಸ್ವಯಂ ಸೇವಕರಿಗೆ ಪುಷ್ಪ ಹಾಕಿ ಜನರು ಸ್ವಾಗತಿಸಿದರು.

ತೆರೆದ ಜೀಪ್‌ನಲ್ಲಿ ಭಾರತ ಮಾತೆಯ ಭಾವಚಿತ್ರ ಮೆರವಣಿಗೆ, ಚಕ್ಕಡಿಯಲ್ಲಿ ಅಖಂಡ ಭಾರತ ನಕ್ಷೆಯ ಭಾವಚಿತ್ರ ಮೆರವಣಿಗೆ ನಡೆಯಿತು. ಚಿಣ್ಣರು ಕೂಡ ಪಥಸಂಚಲನದಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು. ಜಿಲ್ಲೆಯ ಎಸ್‌ಪಿ ರೋಹನ್ ಜಗದೀಶ, ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಹೆಚ್ಚುವರಿ ಎಸ್‌ಪಿ, ಇಬ್ಬರು ಡಿವೈಎಸ್‌ಪಿ, 7 ಜನ ಸಿಪಿಐ, 13 ಪಿಎಸ್‌ಐ, 21 ಎಎಸ್‌ಐ, 139 ಪೊಲೀಸ್ ಸಿಬ್ಬಂದಿಗಳು, 2 ಡಿಆರ್ ವಾಹನ ಒಳಗೊಂಡು ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು.

## ಬಂಜಾರರಿಗೆ ಮೋಸ ಮಾಡಿದ ಕಾಂಗ್ರೆಸ್ ಸರ್ಕಾರ

▶▶ ಮೊದಲನೇ ಪುಟದಿಂದ

ಧನಸಿಂಗ್ ನಾಯಕ್, ಈಶ್ವರ್ ನಾಯಕ್, ಐ.ಎಸ್. ಪೂಜಾರ್, ಟಿ.ಡಿ. ಪೂಜಾರ್, ವಿಠಲ್ ತೆ-ಲೀಟದ, ಮನೋಜ್ ಕಾರಬಾರ, ಸಂತೋಷ ಪವಾರ್, ತೇಜಪ್ಪ ನಾಯಕ್, ಷಣ್ಮುಖ ಆರವಾರಿ, ನಾನೊಬ್ಬ ಡಾವ್, ಭೀಮಪ್ಪ ಲಮಾಣಿ, ಪಾಂಡಪ್ಪ ನಾಯಕ್, ಹರಿಶ್ಚಂದ್ರ ರಾಮಪ್ಪ ಲಮಾಣಿ, ಪವಾರ್ ಶಿವಪ್ಪ ಲಮಾಣಿ, ರಾಮಪ್ಪ ನಾಯಕ್, ರಾಜು ನಾಯಕ್, ಸೋಮಪ್ಪ ಕಾರಬಾರಿ, ಛತ್ರಪ್ಪ ಲಮಾಣಿ, ತುಕರಾಮ್ ರಾಮಪ್ಪ ನಾಯಕ್, ಶಿವಪ್ಪ ಕಾರಬಾರಿ, ಶಂಕರ್ ಚವಾಣ್, ಫಕೀರೇಶ ನಾಯಕ್, ಪರಮೇಶ್ ಕರಾವಳಿ, ಲಾಲಪ್ಪ ಡಾವ್, ಪರಶುರಾಮ್ ಪೂಜಾರಿ ಮತ್ತು ಸೋಮಪ್ಪ ಲಮಾಣಿ ಸೇರಿದಂತೆ ಅಡವಿ ಸೋಮಾಪುರ, ಸಣ್ಣ ಹಾಗೂ ದೊಡ್ಡ ತಾಂಡೆ, ದಿಂಡೂರ, ಕೆರಳ್ಳಿ, ನರೇಗಲ್, ಅಮರಗಟ್ಟಿ, ಅಡರಕಟ್ಟಿ, ಮಹಾಲಿಂಗಪುರ, ಶಿಗ್ಲಿ, ದೊಡ್ಡೂರ ಕಾಲೋನಿ, ಕೊಡಗಾನೂರ, ಸರ್ಜಾಪೂರ ಕೊಂಡಿಕೊಪ್ಪ ಮುಂತಾದ ತಾಂಡಾಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಇಂದು ಗದಗ ಜಿಲ್ಲೆಗೆ ವಿಜಯ ಜ್ಯೋತಿ ಯಾತ್ರೆ


■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾತಂತ್ರ್ಯ ಹೋರಾಟದ ವೀರರಾಣಿ ಕಿತ್ತೂರು ಚನ್ನಮ್ಮನವರ ಗೌರವಾರ್ಥ ಪ್ರತಿ ವರ್ಷ ಅಕ್ಟೋಬರ್ 23, 24 ಹಾಗೂ 25 ರಂದು ಕಿತ್ತೂರಿನ ಕೋಟೆ ಆವರಣದಲ್ಲಿ ಕಿತ್ತೂರು ಉತ್ಸವವನ್ನು ಆಚರಿಸಲಾಗುತ್ತಿದೆ. ಉತ್ಸವದ ಪೂರ್ವಭಾವಿಯಾಗಿ ವಿಜಯ ಜ್ಯೋತಿ ಯಾತ್ರೆಯು ರಾಜ್ಯದ ವಿವಿಧ ಜಿಲ್ಲೆಗಳಿಗೆ ಸಂಚರಿಸುತ್ತಿದೆ.

ಅಕ್ಟೋಬರ್ 14 ರಂದು ಹಾವೇರಿಯಿಂದ ಮಧ್ಯಾಹ್ನ 3.30 ಗಂಟೆಗೆ ಗದಗ ಜಿಲ್ಲೆಗೆ ವಿಜಯ ಜ್ಯೋತಿಯು ಆಗಮಿಸಲಿದೆ. ನಗರದ ಐ.ಬಿಯಲ್ಲಿ ವಿಜಯ ಜ್ಯೋತಿಯ ಪೂಜೆ ನೆರವೇರಲಿದೆ. ವಿಜಯಜ್ಯೋತಿ ಯಾತ್ರೆಯು ಮುಳಗುಂದ ನಾಕಾ ಮಾರ್ಗವಾಗಿ ಚನ್ನಮ್ಮ ವೃತ್ತಕ್ಕೆ ತಲುಪುವುದು. ಸಂಜೆ 5.00 ಗಂಟೆಗೆ ವಿಜಯ ಜ್ಯೋತಿಯ ಯಾತ್ರೆಯ ಬೀಳ್ಕೊಡುಗೆ ಜರುಗಲಿದ್ದು, ವಿಜಯ ಜ್ಯೋತಿಯ ಯಾತ್ರೆಯು ಲಕ್ಕುಂಡಿ ಐತಿಹಾಸಿಕ ಸ್ಥಳ, ಕೊಪ್ಪಳ, ವಿಜಯನಗರ ಮಾರ್ಗವಾಗಿ ಹಂಪಿಗೆ ಸಂಚರಿಸಲಿದೆ. ಕನ್ನಡ ಅಭಿಮಾನಿಗಳು, ದೇಶಭಕ್ತರು ಸೇರಿದಂತೆ ಸಾರ್ವಜನಿಕರು ಯಾತ್ರೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಥಮ ಬಾರಿಗೆ ಅಧಿಕಾರಕ್ಕೇರಿದ ಬಿಜೆಪಿ

■ ವಿಜಯಸಾಕ್ಷಿ ಸುದ್ದಿ, ಹೂವಿನ ಹಡಗಲಿ



ತಾಲೂಕಿನ ಟಿಎಪಿಸಿಎಂಎಸ್‌ಗೆ ನಡೆದ ಚುನಾವಣೆಯಲ್ಲಿ 13 ಸ್ಥಾನಗಳಲ್ಲಿಯೂ ಜಯಗಳಿಸಿದ ಬಿಜೆಪಿ ಪ್ರಪ್ರಥಮ ಬಾರಿಗೆ ಅಧಿಕಾರದ ಗದ್ದುಗೆ ಏರಿದ್ದರೆ, ಕಾಂಗ್ರೆಸ್ ಪಕ್ಷ ಒಂದೂ ಖಾತೆ ತೆರೆಯದೆ ತೀವ್ರ ಮುಖಭಂಗ ಎದುರಿಸಿದೆ.

'ಎ' ವರ್ಗದ ಸದಸ್ಯ ಸ್ಥಾನಕ್ಕೆ ಬಿಜೆಪಿ ಬೆಂಬಲಿತ ಬೆನ್ನೂರು ನಿಂಗಪ್ಪ (ಹಗರನೂರು), ರಾಜಶೇಖರ ಗೌಡ (ಇಟಗಿ), ಬಿ.ಎಂ. ವೀರಯ್ಯ (ಹಿರೇಹಡಗಲಿ), ನೆಪೋಲಿಯನ್ (ಹೊಳಗುಂದಿ), ಕೆ ಮಂಜುನಾಥ (ದಾಸನಹಳ್ಳಿ) ಆಯ್ಕೆಯಾಗಿದ್ದು, 'ಬಿ' ವರ್ಗದ ಸದಸ್ಯ ಸ್ಥಾನಕ್ಕೆ ಸಾಮಾನ್ಯವಾಗಿ ಎರಡು ಸ್ಥಾನಗಳಿಗೆ ಮಲ್ಕಿ ಒಡೆಯರ್ ನಾಗಭೂಷಣ-729 ಮತ, ಜಿ. ಮಲ್ಲಪ್ಪ 595 ಮತ ಪಡೆದು ಜಯಶಾಲಿಯಾದರು.

ಪರಿಶಿಷ್ಟ ಜಾತಿಯ ಒಂದು ಸ್ಥಾನಕ್ಕೆ ಚಂದ್ರ ನಾಯಕ್-819 ಮತ ಪಡೆದರೆ, ಪರಿಶಿಷ್ಟ ಪಂಗಡದ ಒಂದು ಸ್ಥಾನಕ್ಕೆ ಈ ಮಹಾಂತೇಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಹಿಂದುಳಿದ 'ಬಿ' ವರ್ಗದ ಒಂದು ಸ್ಥಾನಕ್ಕೆ ಹಕ್ಕಂಡಿ ಮಹಾದೇವ-751 ಮತ, ಹಿಂದುಳಿದ 'ಎ' ವರ್ಗದ ಒಂದು ಸ್ಥಾನಕ್ಕೆ ಎ.ಜೆ. ವೀರೇಶ್-676 ಮತ, ಮಹಿಳಾ ಕ್ಷೇತ್ರದ ಎರಡು ಸ್ಥಾನಗಳಿಗೆ ಎಂ ಸಂಧ್ಯಾ 772 ಮತ, ಹಣ್ಣಿ ಸುಮ 767 ಮತ ಪಡೆದು ವಿಜಯಶಾಲಿಯಾದರು.

ನೂತನವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ಶಾಸಕ ಕೃಷ್ಣನಾಯ್ಕ್, ಮಾಜಿ ಶಾಸಕ ನಂದಿಹಳ್ಳಿ ಹಾಲಪ್ಪ, ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಅಧ್ಯಕ್ಷ ಸಿದ್ದಪ್ಪ ಹೊಸಮನಿ, ತಾಲೂಕು ಪ್ರಧಾನ ಕಾರ್ಯದರ್ಶಿ ಶಿವರಾಜ್ ಹೊಳಗೊಂದಿ, ತಾಲೂಕು ಉಪಾಧ್ಯಕ್ಷ ವಿಠಲನಾಯ್ಕ್, ಪುರ ಗ್ರಾಮ ಘಟಕದ ಅಧ್ಯಕ್ಷ ಕಾಗನೂರು ಮಂಜುನಾಥ ಸೇರಿದಂತೆ ರೈತ ಬಾಂಧವರು, ಪಕ್ಷದ ಮುಖಂಡರಾದ ಎಂ.ಬಿ. ಬಸವರಾಜ, ಪೂಜಪ್ಪ, ಈಟಿ ಲಿಂಗರಾಜ್, ವಾರದ ಗೌಸ್ ಮೋದಿನ್, ಪುನೀತ್ ದೊಡ್ಮನಿ ಅಭಿನಂದಿಸಿದ್ದಾರೆ.

## ವಿದ್ಯಾರ್ಥಿ ಅವಧಿಯನ್ನು ಕಲಿಕೆಗೆ ಮೀಸಲಿಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಂಯಂಪಾಲನೆ, ದೃಢನಿಶ್ಚಯ, ಕಠಿಣ ಪರಿಶ್ರಮ, ಪ್ರಾಮಾಣಿಕತೆಯ ಗುಣಗಳನ್ನು ಹೊಂದಿರುವ ವಿದ್ಯಾರ್ಥಿಗಳು ಕುಟುಂಬದ ಭರವಸೆ, ರಾಷ್ಟ್ರದ ಭವಿಷ್ಯ ಮತ್ತು ವಿದ್ಯಾಲಯದ ಹೆಮ್ಮೆಯಾಗಿದ್ದು, ಬದುಕಿನ ಸುವರ್ಣ ಕಾಲವಾಗಿರುವ ವಿದ್ಯಾರ್ಥಿ ಅವಧಿಯನ್ನು ಕಲಿಕೆಗೆ ಮೀಸಲಿಟ್ಟಾಗ ಮಾತ್ರ ಬದುಕನ್ನು ಸುಂದರವಾಗಿ ಕಟ್ಟಿಕೊಳ್ಳಲು ಸಾಧ್ಯವೆಂದು ಪ್ರೊ. ಸುಧಾ ಕೌಜಗೇರಿ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಬಿಎ, ಬಿಕಾಂ, ಬಿಎಸ್ಸಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಓರಿಯಂಟೇಶನ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಓರಿಯಂಟೇಶನ್ ಕಾರ್ಯಕ್ರಮದ ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳಿಗೆ ಕಾಲೇಜಿನ ಭೌತಿಕ ಸ್ವರೂಪ, ಶೈಕ್ಷಣಿಕ ತತ್ವಗಳು, ಸಂಸ್ಕೃತಿ, ನಿಯಮಗಳು, ಮೂಲಸೌಕರ್ಯಗಳನ್ನು ಪರಿಚಯಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಿದ್ದು, ಕಾಕಚೇಷ್ಟ (ಕಾಗೆಯಂತೆ ಪ್ರಯತ್ನ), ಬಕೋಧ್ಯಾನ (ಬೆಳ್ಳಕ್ಕಿಯಂತೆ ಏಕಾಗ್ರತೆ), ಶ್ವಾನನಿದ್ರೆ (ನಾಯಿಯಂತೆ ಲಘು ನಿದ್ರೆ), ಅಲ್ಪಾಹಾರ (ಅಲ್ಪ ಆಹಾರ ಸೇವನೆ), ಗೃಹತ್ಯಾಗ (ಐಷಾರಾಮಿ ವಸ್ತುಗಳು ಮತ್ತು ಅನಾವಶ್ಯಕ ಕಾರ್ಯಗಳಿಂದ ದೂರ) ಪಂಚಗುಣಗಳನ್ನು ಮೈಗೂಡಿಸಿಕೊಂಡು ತಮ್ಮ ಕಲಿಕೆಯನ್ನು ಉತ್ತಮವಾಗಿ ಮುಂದುವರಿಸಿರೆಂದು ಹೇಳಿದರು.

ಪ್ರೊ. ಲಕ್ಷ್ಮಣ ಮುಳಗುಂದ 'ಆಂತರಿಕ ಮತ್ತು ಸೆಮಿಸ್ಟರ್ ಪರೀಕ್ಷೆಗಳು', ಎಂ.ಎ. ನವಲಗುಂದ 'ವಿವಿಧ ಘಟಕಗಳ ಕಾರ್ಯಚಟುವಟಿಕೆಗಳು', ಡಾ. ಜಿತೇಂದ್ರ ಜಹಾಗೀರದಾರ 'ವಿದ್ಯಾರ್ಥಿಗಳಲ್ಲಿ ಶಿಸ್ತುಪಾಲನೆ', ಮಹಾಂತೇಶ 'ಕ್ರೀಡೆ ಮತ್ತು ಶಿಸ್ತು', ಸುಭಾಷ ಹರಿಹರ 'ವಿದ್ಯಾರ್ಥಿಗಳಲ್ಲಿ ನೈತಿಕತೆ', ಹುಸೇನಭಾಷಾ 'ಸ್ಪರ್ಧಾತ್ಮಕ ಪರೀಕ್ಷೆಗಳು' ಕುರಿತು ಉಪನ್ಯಾಸ ನೀಡಿದರು.

ಜಯಶ್ರೀ ಗೋಣಿಸ್ವಾಮಿ ಪ್ರಾರ್ಥಿಸಿದರು. ಡಾ. ಉಲ್ಲಾಸ ಶೆಟ್ಟಿ ಅತಿಥಿಗಳು ಮತ್ತು ವಿದ್ಯಾರ್ಥಿಗಳನ್ನು ಸ್ವಾಗತಿಸಿ ಪರಿಚಯಿಸಿದರು. ಡಾ. ಶ್ರೀಶವಿಠ್ಠಲ ಡಿ. ವಂದಿಸಿದರು. ಭೀಮೇಶ ಕಾರ್ಯಕ್ರಮ ನಡೆಸಿಕೊಟ್ಟರು. ಬೋಧಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ನಿಧನ

### ಶಂಕರಗೌಡ ಬಾಳಗೌಡ್ರ



**ಹಾವೇರಿ:** ತಾಲೂಕಿನ ಹೊಂಬರಡಿ ಗ್ರಾಮದ ಶಂಕರಗೌಡ ಚನ್ನಬಸನಗೌಡ ಬಾಳಗೌಡ್ರ (81) ಸೋಮವಾರ ನಿಧನ ಹೊಂದಿದರು.

ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ, ಸಹೋದರ-ಸಹೋದರಿಯರನ್ನು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

### ಸೋಮಪ್ಪ ಬೆಂಗಳೂರು



**ಲಕ್ಷ್ಮೇಶ್ವರ:** ಚಿಕ್ಕಂದಿನಿಂದಲೇ ಪಟ್ಟಣದಲ್ಲಿ ದಿನ ಪತ್ರಿಕೆಗಳನ್ನು ವಿತರಿಸುವ ಕಾರ್ಯ ಮಾಡುತ್ತಿದ್ದ ಸೋಮಪ್ಪ ಶಿವಪ್ಪ ಬೆಂಗಳೂರು (55) ಶನಿವಾರ ರಾತ್ರಿ ಅನಾರೋಗ್ಯದಿಂದ ನಿಧನರಾದರು.

ಮೃತರಿಗೆ ಐವರು ಸಹೋದರರು, 7 ಜನ ಸಹೋದರಿಯರು ಸೇರಿ ಅಪಾರ ಬಂಧು-ಬಳಗವಿದೆ.

## ಎಲ್‌ಐಸಿ 1ನೇ ಶಾಖೆಯ ವಾರ್ಷಿಕೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ




ನಗರದ ಭಾರತೀಯ ಜೀವ ವಿಮಾ ನಿಗಮದ 1ನೇ ಶಾಖೆಯಲ್ಲಿ 46ನೇ ವರ್ಷದ ವಾರ್ಷಿಕೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಧಾರವಾಡ ವಿಭಾಗದ ಸೀನಿಯರ್ ಡಿವಿಷನಲ್ ಮ್ಯಾನೇಜರ್ ಎಸ್‌ಡಿಎಂಬಿ ಎಸ್ ಚಕ್ರವರ್ತಿ, ಮಾರ್ಕೆಟಿಂಗ್ ಮ್ಯಾನೇಜರ್ ಎಂಎಂ ರತ್ನಪ್ರಭಾ ಶಂಕರ ಮತ್ತು ಸೇಲ್ಸ್ ಮ್ಯಾನೇಜರ್ ಎಂ.ಎಸ್. ಪ್ರಶಾಂತ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಎಸ್‌ಡಿಎಂ ಚಕ್ರವರ್ತಿ ಮಾತನಾಡಿ, ಎಲ್‌ಐಸಿ ದೇಶದಲ್ಲೇ ಅತಿ ದೊಡ್ಡ ವಿಮಾ ಸಂಸ್ಥೆಯಾಗಿದ್ದು, ಈ ವಿಮಾ ಸಂಸ್ಥೆ ತನ್ನ ಗ್ರಾಹಕರ ಹಿತರಕ್ಷಣೆಗಾಗಿ ಕೆಲಸ ಮಾಡುತ್ತಿದ್ದು, ಇದೀಗ ತನ್ನ ಎಲ್ಲಾ ಪಾಲಿಸಿಗಳನ್ನು ಹೊಸದಾಗಿ ನವೀಕರಿಸಿದೆ. ಗ್ರಾಹಕರು ಹೆಚ್ಚು ಹೆಚ್ಚು ಪಾಲಿಸಿಗಳನ್ನು ತೆಗೆದು-ಕೊಂಡು ತಮ್ಮ ಜೀವನವನ್ನು ಆರ್ಥಿಕವಾಗಿ ಭದ್ರಪಡಿಸಿಕೊಳ್ಳಬೇಕು ಎಂದು ಹೇಳಿದರು.

ರತ್ನಪ್ರಭಾ ಅವರು ಮಾತನಾಡಿ, ಗದಗ 1ನೇ ಶಾಖೆ ಧಾರವಾಡ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆಯಲು ವಿಮಾ ಪ್ರತಿನಿಧಿಗಳು ಶ್ರಮ ವಹಿಸಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಭಾರತೀಯ ಜೀವ ವಿಮಾ ನಿಗಮದ ಮುಖ್ಯ ಶಾಖಾಧಿಕಾರಿ ಎಚ್.ಎಂ. ಭಜಂತ್ರಿ ವಹಿಸಿದ್ದರು. ಉಪಶಾಖಾಧಿಕಾರಿ ವಿಕ್ರಮ್ ಶೀಲವಂತ ಹಾಗೂ ಜಿ.ಎಸ್. ತಳವಾರ ನಿರೂಪಿಸಿದರು.

## ಗ್ರಂಥ ಬಿಡುಗಡೆ ಪೂರ್ವಭಾವಿ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಪಟ್ಟಣದ ನಿವೃತ್ತ ಶಿಕ್ಷಕರು, ಹಿರಿಯ ಸಾಹಿತಿಗಳು, ಗಜೇಂದ್ರಗಡ ತಾಲೂಕಾ ಪ್ರಥಮ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರೂ ಆಗಿರುವ ಎಂ.ಎ. ಹಿರೆವಡೆಯರ ಕುರಿತ ಅಭಿನಂದನಾ ಗ್ರಂಥ ಈಗಾಗಲೇ ಸಿದ್ಧವಾಗಿದ್ದು, ಅದರ ಲೋಕಾರ್ಪಣೆಯ ಕುರಿತು ಚರ್ಚಿಸಲು ಪೂರ್ವಭಾವಿ ಸಭೆಯನ್ನು ಅ.14ರ ಸಂಜೆ 5ಕ್ಕೆ ಪಟ್ಟಣದ ಹಿರೇಮಠ ಸಭಾಭವನದಲ್ಲಿ ಏರ್ಪಡಿಸಲಾಗಿದೆ ಎಂದು ಹಿರೆವಡೆಯರ ಅವರ ಅಭಿಮಾನಿ ಬಳಗದ ಸದಸ್ಯರಾದ ಡಾ. ಆರ್.ಕೆ. ಗಚ್ಚಿನಮಠ ಮತ್ತು ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಪೂರ್ವಭಾವಿ ಸಭೆಯ ದಿವ್ಯ ಸಾನ್ನಿಧ್ಯವನ್ನು ಬಾಲೆಹೊಸೂರು ಮತ್ತು ಶಿರಹಟ್ಟಿಯ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳವರು ವಹಿಸಲಿದ್ದು, ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದಾರೆ. ನರೇಗಲ್ಲದ ಹಿರೇಮಠ ಹಾಗೂ ಸೌಂದತ್ತಿ ಮೂಲಿಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹಾಗೂ ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ನೇತೃತ್ವವನ್ನು ವಹಿಸಲಿದ್ದು, ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ರೋಣ ಶಾಸಕರಾದ ಜಿ.ಎಸ್. ಪಾಟೀಲ ವಹಿಸಲಿದ್ದಾರೆ.

ಹಿರೆವಡೆಯರ ಗುರುಗಳು ಅನೇಕ ಮಹಾನುಭಾವರ, ಶಿವಶರಣರ ಜೀವನ ಚರಿತ್ರೆಗಳನ್ನು, ಪುರಾಣಗಳನ್ನು ಕನ್ನಡದಿಂದ ಇಂಗ್ಲೀಷ್‌ಗೆ ತರ್ಜುಮೆ ಮಾಡಿ ಈಗಾಗಲೇ ಈ ನಾಡಿನ ಬಹುತೇಕ ಎಲ್ಲ ಮಠಾಧೀಶರ ಮನವನ್ನು ಗೆದ್ದಿದ್ದಾರೆ. ಅವರ ಮೇಲಿನ ಅಭಿಮಾನದಿಂದ ಅವರ ಶಿಷ್ಯ ಚರಂತಿಮಠರು ಅಭಿನಂದನಾ ಗ್ರಂಥವೊಂದನ್ನು ಸಿದ್ಧಪಡಿಸಿದ್ದು, ಅದು ಲೋಕಾರ್ಪಣೆಯ ಹಂತಕ್ಕೆ ಬಂದಿದೆ. ಆದ್ದರಿಂದ ಈ ಪೂರ್ವಭಾವಿ ಸಭೆಗೆ ಹಿರೆವಡೆಯರ ಗುರುಗಳ ಶಿಷ್ಯಂದಿರು, ಅಭಿಮಾನಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಸೂಕ್ತ ಸಲಹೆ-ಸೂಚನೆಗಳನ್ನು ನೀಡಬೇಕೆಂದು ಸಂಘಟಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ರೋಣ, ಗಜೇಂದ್ರಗಡ ತಾ.ಪಂ ಸಿಬ್ಬಂದಿಗಳಿಗೆ ಚಂದ್ರಶೇಖರ್ ಬಿ.ಕಂದಕೂರ ಕರೆ

## ಇ-ಕೆವೈಸಿ ಪೂರ್ಣಗೊಳಿಸಲು ಶ್ರಮ ವಹಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಅಡಿಯಲ್ಲಿ ನೋಂದಾಯಿತ ಕುಟುಂಬಗಳ ಜಾಬ್ ಕಾರ್ಡ್‌ಗಳ ಇ-ಕೆವೈಸಿ ವ್ಯಾಲಿಡೇಶನ್ ಅನ್ನು ತುರ್ತಾಗಿ ಪೂರ್ಣಗೊಳಿಸಬೇಕು. ಈ ಕಾರ್ಯಕ್ಕೆ ಎಲ್ಲಾ ನರೇಗಾ ಕೂಲಿಕಾರರು ಸಕ್ರಿಯವಾಗಿ ಭಾಗವಹಿಸಿ, ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ರೋಣ ಮತ್ತು ಗಜೇಂದ್ರಗಡ ತಾಲೂಕು ಪಂಚಾಯಿತಿ ಸಿಬ್ಬಂದಿಗಳಿಗೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ್ ಬಿ.ಕಂದಕೂರ ಕರೆ ನೀಡಿದರು.

ರೋಣ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ರೋಣ ಮತ್ತು ಗಜೇಂದ್ರಗಡ ತಾಲೂಕುಗಳ ಮನರೇಗಾ ಸಿಬ್ಬಂದಿಗಳಾದ ಜಿಕೆಎಂ, ಬಿಎಫ್‌ಟಿ, ಇಂಜಿನಿಯರ್‌ಗಳು ಮತ್ತು ಇತರ ಸಿಬ್ಬಂದಿಗಳ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.




ಮನರೇಗಾ ಯೋಜನೆಯ ಸಕ್ರಿಯ ಕೂಲಿಕಾರರ ಜಾಬ್ ಕಾರ್ಡ್‌ಗಳನ್ನು ಇ-ಕೆವೈಸಿ ಮೂಲಕ ಪರಿಶೀಲಿಸುವ ಕಾರ್ಯವು ತುರ್ತಾಗಿ ನಡೆಯುತ್ತಿದೆ. ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಸಕ್ರಿಯ ಕುಟುಂಬಗಳ ಜಾಬ್ ಕಾರ್ಡ್ ವ್ಯಾಲಿಡೇಶನ್ ಅನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು ಎಂದು ಹೇಳಿದರು.

ಮನರೇಗಾ ಯೋಜನೆಯಡಿ ನೋಂದಾಯಿತ ಕೂಲಿಕಾರರ ಮಾಹಿತಿಯನ್ನು ಎನ್‌ಎಂಎಂಎಸ್ (ನರೇಗಾ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ತಂತ್ರಾಂಶದಲ್ಲಿ ಇ-ಕೆವೈಸಿ ಮೂಲಕ ಅಪ್‌ಡೇಟ್ ಮಾಡಲಾಗುತ್ತಿದೆ.

ಈಗಾಗಲೇ ಗ್ರಾಮ ಮಟ್ಟದಲ್ಲಿ ಜನರಿಗೆ ಈ ಕುರಿತು ಜಾಗೃತಿ ಮೂಡಿಸಲಾಗಿದ್ದು, ರೋಣ ಮತ್ತು ಗಜೇಂದ್ರಗಡ ತಾಲೂಕುಗಳ ನರೇಗಾ ಶಾಖೆಯ ಐಇಸಿ ವಿಭಾಗವು ತಯಾರಿಸಿದ ಧ್ವನಿ ಮುದ್ರಿಕೆಯನ್ನು ಕಸ ಸಂಗ್ರಹ ವಾಹನಗಳ ಮೂಲಕ ಪ್ರಸಾರ ಮಾಡಲು ಸೂಚಿಸಲಾಗಿದೆ.

ಗ್ರಾಮ ಪಂಚಾಯಿತಿಗಳಲ್ಲಿ ಇ-ಕೆವೈಸಿ ಪ್ರಕ್ರಿಯೆಯನ್ನು ಉಚಿತವಾಗಿ ನಡೆಸಲಾಗುತ್ತಿದ್ದು, ಮೇಟ್‌ಗಳ ಮೂಲಕವೂ ಈ ಸೌಲಭ್ಯವನ್ನು ಪಡೆಯಬಹುದು. ಇ-ಕೆವೈಸಿ ಯೋಜನೆಯು ಮನರೇಗಾ ಕಾರ್ಯಕ್ರಮದ ಪಾರದರ್ಶಕ ಅನುಷ್ಠಾನಕ್ಕೆ ಮಹತ್ವದ ಹೆಜ್ಜೆಯಾಗಿದೆ. ಆದ್ದರಿಂದ, ಎಲ್ಲಾ ಕೂಲಿಕಾರರು ಮತ್ತು ಕಾಯಕ ಬಂಧುಗಳು ಕಡ್ಡಾಯವಾಗಿ ಇ-ಕೆವೈಸಿ ಅಪ್‌ಡೇಟ್ ಮಾಡಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಹೆಚ್ಚಿನ ಮಾಹಿತಿಗಾಗಿ ಗ್ರಾಮ ಪಂಚಾಯಿತಿಯ ಪಿಡಿಒ, ಕಾರ್ಯದರ್ಶಿ, ಡಿಇಒ, ಬಿಎಫ್‌ಟಿ, ಜಿಕೆಎಂ ಅವರನ್ನು ಸಂಪರ್ಕಿಸಲು ಸಿಬ್ಬಂದಿಗಳಿಗೆ ಸೂಚಿಸಲಾಗಿದ್ದು, ಈ ಅಭಿಯಾನವನ್ನು ಯಶಸ್ವಿಗೊಳಿಸಲು ಎಲ್ಲರೂ ಸಹಕರಿಸಬೇಕೆಂದು ಸಭೆಯಲ್ಲಿ ಕರೆ ನೀಡಲಾಯಿತು.

> ಗ್ರಾಮ ಪಂಚಾಯಿತಿ ಮಟ್ಟದ ಸಿಬ್ಬಂದಿಗಳಿಗೆ ಇ-ಕೆವೈಸಿ ಅಪ್‌ಡೇಟ್ ಕಾರ್ಯಕ್ಕೆ ತರಬೇತಿ ನೀಡಲಾಗಿದ್ದು, ಈ ಮೂಲಕ ಪ್ರಗತಿ ಸಾಧಿಸಲು ಸೂಚನೆ ನೀಡಲಾಗಿದೆ. ಆದರೆ, ಕೆಲವು ಗ್ರಾಮಗಳಲ್ಲಿ ಕೂಲಿಕಾರರು ವೈಯಕ್ತಿಕ ಕೆಲಸಕ್ಕಾಗಿ ಮನೆಯಿಂದ ಹೊರಗಡೆ ಇರುವುದರಿಂದ, ಮನೆ-ಮನೆ ಭೇಟಿಯ ಸಂದರ್ಭದಲ್ಲಿ ಮೇಟ್‌ಗಳು ಅಥವಾ ನರೇಗಾ ಸಿಬ್ಬಂದಿಗೆ ಅವರು ಲಭ್ಯವಾಗದಿರುವುದು ಇ-ಕೆವೈಸಿ ಪ್ರಕ್ರಿಯೆಯನ್ನು ನಿಧಾನಗೊಳಿಸಿದೆ. ಇದರಿಂದ ಭವಿಷ್ಯದಲ್ಲಿ ಕೂಲಿಕಾರರಿಗೆ ಕೆಲಸ ನೀಡುವಾಗ ಸಮಸ್ಯೆ ಉಂಟಾಗುವ ಸಾಧ್ಯತೆ ಇದೆ ಎಂದು ಚಂದ್ರಶೇಖರ್ ಕಂದಕೂರು ಎಚ್ಚರಿಕೆ ನೀಡಿದರು.

## ಡಾ. ಎಸ್.ಸಿ. ಚವಡಿ ನಿಸ್ವಾರ್ಥ ಸೇವಕರು



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ತಮ್ಮ ವೃತ್ತಿಯ ಜೊತೆಯಲ್ಲಿ ಸಾಹಿತ್ಯ, ಸಂಸ್ಕೃತಿ, ಶಿಕ್ಷಣ, ಸಮಾಜ ಸೇವೆ, ವಚನ ಸಾಹಿತ್ಯ ಹಾಗೂ ಸಂಘ-ಸಂಸ್ಥೆಗಳ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಿ, ಬಡವರ, ದೀನ-ದಲಿತರ ಸೇವೆ ಮಾಡುತ್ತಿರುವ ಡಾ. ಎಸ್.ಸಿ. ಚವಡಿ ನಿಸ್ವಾರ್ಥ ಸೇವಕರು ಎಂದು ಡಾ. ಎಸ್.ಬಿ. ಶೆಟ್ಟರ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಮುಳಗುಂದ ಹೋಬಳಿ ಘಟಕ ಸಹಯೋಗದಲ್ಲಿ ಲಿಂ. ಗಂಗಮ್ಮ, ಲಿಂ. ಚನ್ನಬಸಪ್ಪ ಚವಡಿ ಇವರ ಸ್ಮರಣಾರ್ಥ ದತ್ತಿ ಉಪನ್ಯಾಸ ಹಾಗೂ ಚವಡಿ ಪ್ರತಿಷ್ಠಾನ ಉದ್ಘಾಟಿಸಿ ಮಾತನಾಡಿ

ಆರ್.ಎಂ. ಕಲ್ಲನಗೌಡರ ಮಾತನಾಡಿ, ರೆ. ಚನ್ನಬಸಪ್ಪ ಉತ್ತಂಗಿಯವರು ಸರ್ವಜ್ಞನ ವಚನ ಸಾಹಿತ್ಯ, ಲಿಂಗಾಯತ ಪರಂಪರೆಯನ್ನು ಉಳಿಸಿ ಬೆಳೆಸಿದವರು. ಸಮಾಜಕ್ಕಾಗಿ ತಮ್ಮನ್ನು ತಾವು ತೊಡಗಿಸಿಕೊಂಡು ಕನ್ನಡ ಸಾಹಿತ್ಯ, ಸಂಸ್ಕೃತಿ, ಪರಂಪರೆಯನ್ನು ಉಳಿಸಿ ಬೆಳೆಸುವ ಮೂಲಕ ಮುಂದಿನ ಪೀಳಿಗೆಗೆ ದಾರಿ ದೀಪವಾದವರು. ಡಾ.ಎಸ್.ಸಿ. ಚವಡಿ ಅವರು ತಂದೆ-ತಾಯಿಯವರ ಹೆಸರಿನಲ್ಲಿ 10 ಲಕ್ಷ ರೂ ದತ್ತಿ ಹಣ ಇಡುವ ಮೂಲಕ ಪ್ರತಿ ವರ್ಷ ಸಮಾಜದ ಸಾಧಕರನ್ನು ಗುರುತಿಸುವ ಕಾರ್ಯ ಶ್ಲಾಘನೀಯ ಎಂದರು.

ಡಾ. ಎಸ್.ಸಿ. ಚವಡಿ ಅವರು ತಮ್ಮ ಸ್ವಂತ ಊರಿನ ಗ್ರಂಥಾಲಯಕ್ಕೆ ಒಂದು ಗುಂಟೆ ಜಾಗ, ದೇವಸ್ಥಾನ ಹಾಗೂ ತಾವು ಕಲಿತ ಶಾಲೆಗೆ ದತ್ತಿ ಹಣವನ್ನು ನೀಡಿದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಧಾರವಾಡ ಮುರುಘಾಮಠ ಹಾಗೂ ಮುಳಗುಂದ ಗವಿಮಠದ ಡಾ. ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿದ್ದರು. ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಶಿವಣ್ಣಾ ನೀಲಗುಂದ, ಎಂ.ಡಿ. ಬಟ್ಟೂರ ಪಾಲ್ಗೊಂಡಿದ್ದರು. ಡಾ. ಆರ್.ಎಂ. ಕಲ್ಲನಗೌಡರ ರೆ. ಉತ್ತಂಗಿ ಚನ್ನಬಸಪ್ಪನವರ ಕುರಿತು ಉಪನ್ಯಾಸ ನೀಡಿದರು. ಡಾ. ಅಶೋಕ ಗೋಧಿ, ಡಾ. ಎಸ್.ಕೆ. ಜೋಶಿ ಅವರನ್ನು ಸನ್ಮಾನಿಸಲಾಯಿತು. ಪ್ರಸಾದ ಸುತಾರ ಸಂಗೀತ ಸೇವೆ ನೀಡಿದರು.

## ಕನೇರಿ ಶ್ರೀಗಳ ಹೇಳಿಕೆ ಅಸಾಂವಿಧಾನಿಕ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಮಹಾರಾಷ್ಟ್ರ ಜತ್ತ್ ತಾಲೂಕಿನ ಬೀಳೂರ ಗ್ರಾಮದ ಸಮಾರಂಭದಲ್ಲಿ ಕನೇರಿಮಠದ ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮಿಗಳು ಲಿಂಗಾಯತ ಮಠಾಧಿಪತಿಗಳನ್ನು ಅಸಾಂವಿಧಾನಿಕ ಪದಗಳಲ್ಲಿ ನಿಂದಿಸಿರುವುದು ಖಂಡನಾರ್ಹವಾಗಿದೆ. ಲಿಂಗಾಯತ ಧರ್ಮ ಹಾಗೂ ಬಸವಾದಿ ಶರಣ ಪರಂಪರೆಯ ಬಗ್ಗೆ ಅಸಮಾಧಾನ ಹಾಗೂ ಪೂರ್ವಾಗ್ರಹ ಹೊಂದಿರುವ ಅವರ ಮಾತುಗಳು ಕರ್ಣಕಠೋರವಾಗಿರುವುದಷ್ಟೇ ಅಲ್ಲ, ಅವರು ತಾವೊಬ್ಬ ಅನಾಗರಿಕ ವ್ಯಕ್ತಿ ಎಂಬುದನ್ನು ತೋರಿಸಿಕೊಟ್ಟಿದ್ದಾರೆ ಎಂದು ಡಂಬಳ-ಗದಗ ತೆ-ಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಜನಸಾಮಾನ್ಯರೂ ಕೂಡ ಬಳಸಲು ಹಿಂದೇಟು ಹಾಕುವ ಕೀಳು ಪದಗಳನ್ನು ಬಳಸಿದ ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮಿಗಳು ತಾವೂ ಒಬ್ಬ ಮಠಾಧಿಪತಿ ಎಂಬುದನ್ನು



ಮರೆತು ಎಲ್ಲ ಮಠಾಧಿಪತಿಗಳ ತಾಯಂದಿರನ್ನು 'ಸೂಳೆ' ಎಂದು ಹೇಳುವ ಮೂಲಕ ಸಮಸ್ತ ಸ್ತ್ರೀ ಸಂಕುಲಕ್ಕೆ ಅಪಮಾನವೆಸಗಿದ್ದಾರೆ. ಮಠಾಧಿಪತಿಗಳನ್ನು.... ಹೊಡೆಯಬೇಕು ಎಂದು ಹೇಳುವ ಇವರ ಮಾತುಗಳು ಭಾರತೀಯ ಸಂಸ್ಕೃತಿಗೆ ಕಳಂಕ. ನಾಲಿಗೆ ಕುಲವನ್ನು ಹೇಳಿತು ಎಂಬಂತಿದೆ ಇವರ ನಡವಳಿಕೆ. ಸಮಾಜದಲ್ಲಿ ಅಶಾಂತಿ, ದೊಂಬಿ, ಗಲಭೆಯನ್ನುಂಟುಮಾಡುವ ಇಂತಹ ವ್ಯಕ್ತಿಗಳ ನಡವಳಿಕೆಗೆ ಸರಕಾರ ಪ್ರತಿಬಂಧ ವಿಧಿಸಬೇಕೆಂದು ಶ್ರೀಗಳು ಸರಕಾರಕ್ಕೆ ಆಗ್ರಹಿಸಿದ್ದಾರೆ.

## ನಿಮ್ಮ ಆಸ್ತಿಯನ್ನು ಪರಭಾರೆ ಮಾಡದಿರಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಮ್ಮ ಹೆಸರಲ್ಲಿ ಇರುವ ಆಸ್ತಿಯನ್ನು ನಿಮ್ಮ ಹೆಸರಲ್ಲಿಯೇ ಉಳಿಸಿಕೊಳ್ಳಿ. ಯಾವುದೋ ವ್ಯಾಮೋಹಕ್ಕೆ ಬಿದ್ದು ಪರಭಾರೆ ಮಾಡಿದರೆ ಮುಂದೆ ಪಶ್ಚಾತ್ತಾಪ ಪಡಬೇಕಾದೀತು ಎಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು.

ಸಂಘದ ಕಚೇರಿಯಲ್ಲಿ ನಡೆದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿಮ್ಮ ಪಿಂಚಣಿ ಮತ್ತಿತರ ದಾಖಲೆಗಳಲ್ಲಿ ನಾಮಿನಿ ಹೆಸರು ಒಂದೇ ರೀತಿಯಾಗಿರದಿದ್ದಲ್ಲಿ ತಡ ಮಾಡದೆ ಜಿಲ್ಲಾ ಸೈನಿಕ ಕಚೇರಿಯ ಮೂಲಕ ರಿಕಾರ್ಡ್ ಆಫೀಸ್‌ಗೆ ಪತ್ರವನ್ನು ಬರೆದು ಪಾರ್ಟ್-2 ಆರ್ಡರ್ ಮಾಡಿಸಲು ಅವರು ತಿಳಿಸಿದರು.

ನಿವೃತ್ತ ಸೈನಿಕರಿಗೆ ಉಚಿತ ನಿವೇಶನ ನೀಡಲು ವಿನಂತಿಸಿ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದೆವು. ಅದಕ್ಕೆ ಸ್ಪಂದಿಸಿರುವ ಜಿಲ್ಲಾಧಿಕಾರಿಗಳು ಗಜೇಂದ್ರಗಡದ ತಹಸೀಲ್ದಾರರಿಗೆ ಪತ್ರವನ್ನು ಬರೆದು ನಿಮ್ಮ ವ್ಯಾಪ್ತಿಯಲ್ಲಿನ ಪಟ್ಟಣ ಪಂಚಾಯಿತಿ, ನಗರ ಸಭೆಗಳ ವ್ಯಾಪ್ತಿಯಲ್ಲಿ ನಿವೇಶನ ಲಭ್ಯವಿದ್ದಲ್ಲಿ ಅರ್ಹರನ್ನು ಗುರುತಿಸಿ ನಿವೇಶನ ಮಂಜೂರು ಮಾಡಲು ತಿಳಿಸಿದ್ದಾರೆ ಎಂದರು.

ಸಭೆಯಲ್ಲಿ ಶಿವಪ್ಪ ಹಂಡಿ, ಉಮೇಶ ಕರಮುಡಿ, ಗುರುಶಾಂತಗೌಡ ಮಲ್ಲನಗೌಡ್ರ, ಬಸವರಾಜ ಕಡೆತೋಟದ, ಸಂಗಪ್ಪ ಕುಷ್ಟಗಿ, ಕುಮಾರಸ್ವಾಮಿ ಕೋರಧಾನ್ಯಮಠ, ಶಿವಾನಂದ ಬಂಡಿಹಾಳ, ಈರಪ್ಪ ದೊಡ್ಡಣ್ಣವರ, ಮಲ್ಲಪ್ಪ ಕಡೆತೋಟದ ಮತ್ತು ರಾಮಪ್ಪ ರೋಣದ ಪಾಲ್ಗೊಂಡಿದ್ದರು.



## ಇಸ್ರೇಲಿ ಸಂಸತ್ತಿನಲ್ಲಿ ಟ್ರಂಪ್ ಭಾಷಣಕ್ಕೆ ಅಡ್ಡಿಪಡಿಸಿದ ಪ್ರತಿಭಟನಾಕಾರರು

■ ವಿಜಯಸಾಕ್ಷಿ ಸುದ್ದಿ, ಇಸ್ರೇಲಿ

ಇಸ್ರೇಲಿ ಸಂಸತ್ತಿನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಭಾಷಣಕ್ಕೆ ಪ್ರತಿಭಟನಾಕಾರರು ಅಡ್ಡಿಪಡಿಸಿದರು. ಕೂಡಲೇ ನೆಸ್ಸೆಟ್ ಸದಸ್ಯರನ್ನು ಹೊರಹಾಕಲಾಯಿತು. ಜಂಟಿ ಹಡಾಶ್-ತಾಲ್ ಪಕ್ಷದ ಸದಸ್ಯರಾದ ಓಫರ್ ಕಾಸಿಫ್ ಮತ್ತು ಅಯ್ಮೆನ್ ಒಡೆಹ್ ಅವರನ್ನು ಹೊರಗೆ ಕರೆದೊಯ್ಯಲಾಯಿತು. ಅವರಲ್ಲಿ ಒಬ್ಬರು ಜನಾಂಗೀಯ ಹತ್ಯೆ ಎಂದು ಬರೆದಿರುವ ಸಣ್ಣ ಫಲಕವನ್ನು ಹಿಡಿದಿದ್ದರು.

ಭದ್ರತಾ ಸಿಬ್ಬಂದಿ ವೇಗವಾಗಿ ಒಳಗೆ ಬಂದು ಅವರನ್ನು ಹೊರಗೆ ಕರೆದೊಯ್ದರು. ಟ್ರಂಪ್ ವೇದಿಕೆಯಲ್ಲಿ ನಿಂತು ನಡೆಯುತ್ತಿರುವುದನ್ನು ವೀಕ್ಷಿಸಿದರು.

## ಆರ್‌ಎಸ್‌ಎಸ್ ನಿಷೇಧ ಯಾರಿಂದಲೂ ಸಾಧ್ಯವಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶ ಭಕ್ತಿ, ದೇಶ ಸೇವೆಯಲ್ಲಿ ಸದಾ ಮುಂಚೂಣಿಯಲ್ಲಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘ ದೇಶವಷ್ಟೇ ಅಲ್ಲದೇ ವಿದೇಶಿದಲ್ಲಿಯೂ ಸ್ವಯಂ ಸೇವಕರನ್ನು ಹೊಂದಿದೆ. 100 ವರ್ಷಗಳ ಇತಿಹಾಸ ಹೊಂದಿರುವ ಸಂಘವನ್ನು ತಮ್ಮ ರಾಜಕೀಯ ಕುರ್ಚಿ ಉಳಿಸಿಕೊಳ್ಳುವ ಸಲುವಾಗಿ ಕಾಂಗ್ರೆಸ್ ಹೈಕಮಾಂಡ್ ಮೆಚ್ಚಿಸಲು ಪ್ರಿಯಾಂಕ ಖರ್ಗೆ ಸೇರಿದಂತೆ ಅನೇಕರು ನಿಷೇಧಿಸುತ್ತೇವೆ ಎಂದಿರುವುದು ಖಂಡನಿಯ. ಕೂಡಲೇ ಪ್ರಿಯಾಂಕಾ ಖರ್ಗೆ ದೇಶದ ಜನತೆಯ ಕ್ಷಮೆ ಕೋರಬೇಕು ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, 1925ರಲ್ಲಿ ದೇಶ ಸೇವೆಗೆ ಸ್ಥಾಪಿಸಲಾದ ಸಂಘಕ್ಕೆ 10 ದಶಕದ ಇತಿಹಾಸವಿದೆ. ಕಾಂಗ್ರೆಸ್ ಪಕ್ಷ ಹಿಂದೂ ವಿರೋಧಿಯಾಗಿದ್ದು, ದೇಶ ರಕ್ಷಣೆಗೆ ನಿಂತ ಸ್ವಯಂಸೇವಕರ ಸಂಘದ ನಿಷೇಧ ಯಾರಿಂದಲೂ ಸಾಧ್ಯವಿಲ್ಲ. ಬದಲಾದ ರಾಜಕೀಯ ಬೆಳವಣಿಗೆಯಲ್ಲಿ ತಮ್ಮ ಸ್ಥಾನವನ್ನು ಉಳಿಸಿಕೊಳ್ಳಲು ಆರ್‌ಎಸ್‌ಎಸ್ ನಿಷೇಧಿಸುವ ಹೇಳಿಕೆ ಕೊಡುತ್ತಿರುವುದು ದೇಶದ



ಸಾರ್ವಜನಿಕರಿಗೆ ಮಾಡಿರುವ ಅಪಮಾನವಾಗಿದೆ ಎಂದಿದ್ದಾರೆ.

ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಬೆಂಗಳೂರು ಶಾಸಕ ಮುನಿರತ್ನ ಅವರಿಗೆ ಗಣವೇಷದಲ್ಲಿರುವಾಗಲೇ ತುಂಬಿದ ಸಾರ್ವಜನಿಕ ಸಭೆಯಲ್ಲಿ ನಿಂದಿಸಿ ಅವಮಾನ ಮಾಡಿದ್ದಾರೆ. ಇದೇ ಡಿ.ಕೆ. ಶಿವಕುಮಾರ ವಿಧಾನಸಭೆಯಲ್ಲಿ ಸಂಘದ ಗೀತೆ ಹಾಡಿದ್ದನ್ನು ಮರೆತಿದ್ದಾರೆ.

ಸಂಘದ ಕಾರ್ಯ ಮೆಚ್ಚಿ ಇಡೀ ದೇಶವೇ ಜೊತೆಗೆ ನಿಂತಿದೆ. ಕೂಡಲೇ ಕಾಂಗ್ರೆಸ್ ಪಕ್ಷದ ನಾಯಕರು ಆರ್‌ಎಸ್‌ಎಸ್ ನಿಷೇಧಿಸುವ ಮಾತುಗಳನ್ನು ನಿಲ್ಲಿಸಿ ದೇಶದ ಜನತೆಯ ಕ್ಷಮೆ ಕೋರಬೇಕು ಎಂದು ಆಗ್ರಹಿಸಿದ್ದಾರೆ.

## ಮದಕರಿ ನಾಯಕ ಧೀರ ಹೋರಾಟಗಾರ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿಯ ಹಳೇ ಬಸ್ ನಿಲ್ದಾಣದಲ್ಲಿ ಸೋಮವಾರ ಕೋಟೆ ನಾಡಿನ ಕಣ್ಮಣಿ ವೀರ ಮದಕರಿ ನಾಯಕರ ಜಯಂತಿಯನ್ನು ನಾಯಕ ಸಮಾಜದ ವತಿಯಿಂದ ಮದಕರಿ ನಾಯಕರ ಭಾವಚಿತ್ರಕ್ಕೆ ಪುಷ್ಪಾರ್ಚನೆಯೊಂದಿಗೆ ಅದ್ದೂರಿಯಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡ ಸೋಮಣ್ಣ ಡಾಣಗಲ್ಲ ಮಾತನಾಡಿ, ಮದಕರಿ ನಾಯಕ ಧೀರ ಹೋರಾಟಗಾರರಾಗಿದ್ದರು. ಕನ್ನಡ ನಾಡನ್ನು ಉಳಿಸಿ ಬೆಳೆಸಲು ಅವರು ಮಾಡಿದ ಕಾರ್ಯಗಳು ನಮಗೆಲ್ಲ ಮಾರ್ಗದರ್ಶಿಯಾಗಿವೆ. ಅವರಂತೆ ನಮ್ಮ ಮಕ್ಕಳು ತಾಯಿ ನಾಡಿನ ಕುರಿತು ಹೆಮ್ಮೆ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿವಾನಂದ ತಳವಾರ, ರಾಮಣ್ಣ ತಳವಾರ, ಮಂಜು ಇಚ್ಚಂಗಿ, ಮಹಾದೇವ ಸಂಧಿಮನಿ, ರಾಜು ಓಲೇಕಾರ, ದೇವಪ್ಪ ವಾಲಿಕಾರ, ಮಾಯಪ್ಪ ವಾಲಿಕಾರ, ಮಹಾಂತೇಶ ತಳವಾರ, ಸುಹಾಸ್ ವಾಲಿಕಾರ, ಈರಣ್ಣ ಅಳ್ಳಳ್ಳಿ, ಸುರೇಶ ಇಟಗಿ, ರಾಜು ನದಾಫ್, ಉಳ್ಳಟ್ಟಿ ರಾಮಣ್ಣ ಮತ್ತಿತರರು ಇದ್ದರು.

### ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ್ ವಿ ಅಧ್ಯಕ್ಷತೆಯಲ್ಲಿ ಕೆಡಿಪಿ ಸಭೆ

## ಜನರಲ್ಲಿ ಸರಕಾರದ ಬಗ್ಗೆ ವಿಶ್ವಾಸ ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸರಕಾರಗಳು ಜನರ ಕಲ್ಯಾಣಕ್ಕಾಗಿ, ರಾಜ್ಯದ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ರೂಪಿಸಿ, ಸೌಲಭ್ಯಗಳನ್ನು ನೀಡುತ್ತವೆ. ಇವುಗಳನ್ನು ಅರ್ಹ ಫಲಾನುಭವಿ ಜನರಿಗೆ ಸಕಾಲದಲ್ಲಿ ತಲುಪಿಸುವ ಮೂಲಕ ಸಾರ್ವಜನಿಕರಲ್ಲಿ ಸರಕಾರದ ಬಗ್ಗೆ ವಿಶ್ವಾಸ, ಸದಾಭಿಪ್ರಾಯ ಮೂಡಿಸುವುದು ಎಲ್ಲ ಸರಕಾರಿ ನೌಕರರ ಆದ್ಯ ಕರ್ತವ್ಯವಾಗಿದೆ ಎಂದು ಜಿ.ಪಂ ಆಡಳಿತಾಧಿಕಾರಿ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ರಾಮ್ ಪ್ರಸಾತ್ ಮನೋಹರ್ ವಿ ಹೇಳಿದರು.

ಅವರು ಸೋಮವಾರ ಜಿ.ಪಂ ಸಭಾಂಗಣದಲ್ಲಿ 2025-26ನೇ ಸಾಲಿನ ಸೆಪ್ಟೆಂಬರ್ 2025ರ ಅಂತ್ಯಕ್ಕೆ ಕೊನೆಗೊಂಡಂತೆ ಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗ್ರಾಮ, ಹೋಬಳಿ, ತಾಲೂಕು ಹಂತದ ಕ್ಷೇತ್ರಮಟ್ಟದಲ್ಲಿ ಕರ್ತವ್ಯ ನಿರ್ವಹಿಸುವ ಎಲ್ಲ ಅಧಿಕಾರಿ, ಸಿಬ್ಬಂದಿಗಳು ಅಲ್ಲಿನ ಸಾರ್ವಜನಿಕರೊಂದಿಗೆ ನೇರವಾಗಿ, ನಿರಂತರ ಸಂಪರ್ಕದಲ್ಲಿರಬೇಕು. ಗ್ರಾಮ ಸಭೆಗಳಿಗೆ ಕಡ್ಡಾಯವಾಗಿ ಹಾಜರಾಗಿ, ಸರಕಾರದ ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳ್ಳುವ ಯೋಜನೆ, ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿ, ಜನರಲ್ಲಿ ಜಾಗೃತಿ ಮೂಡಿಸಬೇಕು. ಇದು ಸರಕಾರದ ಕಾರ್ಯಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಸದಾಭಿಪ್ರಾಯ ಮೂಡಲು ಪ್ರಮುಖ ಪಾತ್ರ ನಿರ್ವಹಿಸುತ್ತದೆ ಎಂದು ತಿಳಿಸಿದರು.




ಪ್ರಸಕ್ತ ಸಾಲಿನ ಕಾಮಗಾರಿ, ಯೋಜನೆಗಳು ಕಾಲಮಿತಿಯಲ್ಲಿ ಅನುಷ್ಠಾನವಾಗಬೇಕು. ಬಿಡುಗಡೆ ಆದ ಅನುದಾನ ಲ್ಯಾಪ್ಸ್ ಆದರೆ ಸಂಬಂಧಿಸಿದ ಅಧಿಕಾರಿಯನ್ನು ಹೊಣೆ ಮಾಡಲಾಗುತ್ತದೆ. ಕಾಮಗಾರಿ ಅನುಷ್ಠಾನದಲ್ಲಿ ಸರಕಾರಿ ನಿಯಮಗಳ ಉಲ್ಲಂಘನೆ ಆಗಬಾರದು. ಕಾಮಗಾರಿಗಳು ಗುಣಮಟ್ಟದಿಂದ ಕೂಡಿದ್ದು, ಸಮರ್ಪಕವಾಗಿ ಜಾರಿ ಆಗಬೇಕು. ಹಿರಿಯ ಅಧಿಕಾರಿಗಳ ತಂಡ ತಾಲೂಕುವಾರು, ಘಟಕವಾರು ಕಾಮಗಾರಿ, ಕಾರ್ಯಕ್ರಮಗಳನ್ನು ಪರಿಶೀಲಿಸಿ, ನಿಯಮ ಪಾಲನೆ ಆಗಿರುವ ಬಗ್ಗೆ ಖಾತರಿ ಪಡಿಸಿಕೊಳ್ಳಬೇಕು. ಈ ಕುರಿತು ಪ್ರತಿ ತಿಂಗಳು ತಮ್ಮ ಕಚೇರಿಗೆ ವರದಿ ಸಲ್ಲಿಸಬೇಕೆಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ತಾಯಂದಿರ ಮರಣ ಪ್ರಮಾಣ ಹೆಚ್ಚಿದ್ದು, ಅದರ ಬಗ್ಗೆ ಪರಿಶೀಲಿಸಬೇಕು. ಮರಣ ಪ್ರಮಾಣ ಕಡಿಮೆ ಆಗುವಂತೆ ಆರೋಗ್ಯ ಇಲಾಖೆ ಮುನ್ನಚ್ಚರಿಕೆ ವಹಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲೆಯಲ್ಲಿ ಇನ್ನಷ್ಟು ತೃಪ್ತಿಕರವಾಗಿ ಕೆಲಸ ಮಾಡಬೇಕು. ಮಕ್ಕಳ ಆಹಾರ ಮಧ್ಯವರ್ತಿಗಳ ಪಾಲು, ಬೇರೆಯವರ ಪಾಲು ಆಗಬಾರದು. ಮುಂದಿನ ದಿನಗಳಲ್ಲಿ ಇಂತಹ ಲೋಪಗಳು ಕಂಡಬಂದರೆ ಶಿಸ್ತು ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಎಚ್ಚರಿಕೆ ನೀಡಿದರು.

ಜಿ.ಪಂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿದರು. ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಪ್ರೊಬೇಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ ವೇದಿಕೆಯಲ್ಲಿದ್ದರು. ಜಿ.ಪಂ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ಸ್ವಾಗತಿಸಿ, ನಿರ್ವಹಿಸಿದರು. ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ವಂದಿಸಿದರು.

> ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಬೆಳೆಹಾನಿ ಸಮೀಕ್ಷೆಯನ್ನು ಪೂರ್ಣಗೊಳಿಸಿ, ಅರ್ಹ ರೈತರ ಹೆಸರುಗಳನ್ನು ಪರಿಹಾರ ಪೋರ್ಟಲ್‌ನಲ್ಲಿ ಈಗಾಗಲೇ ಎಂಟ್ರಿ ಮಾಡಲಾಗಿದೆ.
>
> ಅಂದಾಜು 97 ಸಾವಿರ ಹೆಕ್ಟೇರ್ ಪ್ರದೇಶದ ಬೆಳೆಹಾನಿಗೆ ಅಂದಾಜು ರೂ. 85 ಕೋಟಿ ಮೊತ್ತದ ಪರಿಹಾರ ಅಗತ್ಯವಿದೆ. ಈಗಾಗಲೇ ರೂ. 22 ಕೋಟಿ ಪರಿಹಾರ ಹಣ ಬಿಡುಗಡೆ ಆಗಿದ್ದು, ರೈತರ ಬ್ಯಾಂಕ್ ಖಾತೆಗಳಿಗೆ ಹಂತ ಹಂತವಾಗಿ ಜಮೆ ಮಾಡಲಾಗುತ್ತಿದೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka